ಸಂಪುಟ : 10 ಸಂಚಿಕೆ: 255 ಪುಟ : 4+2 ಬೆಲೆ: 3.00 ಶನಿವಾರ ನವೆಂಬರ್ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 255 Pages : 4+2 Price : 3.00 Saturday November 22 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಜಿಲ್ಲಾ ಯುವ ಕಾಂಗ್ರೆಸ್ ಸಭೆ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಮುಂಬರುವ ಪಶ್ಚಿಮ ಪದವೀಧರರ ವಿಧಾನ ಪರಿಷತ್ ಚುನಾವಣೆ ಪ್ರಯುಕ್ತ ಮತದಾರರ ಪಟ್ಟಿಯಲ್ಲಿ ಪದವೀಧರರ ಹೆಸರನ್ನು ನೋಂದಣಿ ಮಾಡಿಸುವ ಕುರಿತು ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ನ. 22ರಂದು ಬೆಳಿಗ್ಗೆ 11 ಗಂಟೆಗೆ ಸಭೆ ಜರುಗಲಿದೆ.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಯುವ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು, ಮುಖಂಡರು ಹಾಗೂ ಯುವ ಕಾರ್ಯಕರ್ತರು ಪಾಲ್ಗೊಳ್ಳಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಪ್ರಕಟಣೆ ತಿಳಿಸಿದೆ.

## ಗದಗ ತಾಲೂಕಾ ಮಟ್ಟದ ಪಂಚ ಗ್ಯಾರಂಟಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಜರುಗುವ ತಾಲೂಕು ಮಟ್ಟದ ಗ್ಯಾರಂಟಿ ಸಭೆಯನ್ನು ನವೆಂಬರ್ 25 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ವಿಡಿಯೋ ಕಾನ್ಫರೆನ್ಸ್ ಹಾಲ್ ನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಕ್ಕೆಜೋಳದ ಬೆಲೆಕುಸಿತದಿಂದ ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರದ ನೆರವು: ಸಿಎಂ

# ಮೆಕ್ಕೆಜೋಳ ಆಮದು ನಿಲ್ಲಿಸುವಂತೆ ಕೇಂದ್ರಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೆಕ್ಕೆಜೋಳ ಬೆಲೆ ಕುಸಿತದಿಂದ ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರ ಎಲ್ಲ ರೀತಿಯ ನೆರವು ಒದಗಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶುಕ್ರವಾರ ಮೈಸೂರಿನ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಒಂದು ಕ್ವಿಂಟಾಲ್ ಮೆಕ್ಕೆಜೋಳಕ್ಕೆ 2400 ರೂ.ಗಳ ಎಂಎಸ್‌ಪಿ ದರ ನಿಗದಿಯಾಗಿದ್ದು, ಇದುವರೆಗೆ ಖರೀದಿ ಕೇಂದ್ರ ಪ್ರಾರಂಭವಾಗಿಲ್ಲ. ಖರೀದಿ ಪ್ರಕ್ರಿಯೆ ಪ್ರಾರಂಭಿಸಬೇಕೆಂದು ರೈತರು ಒತ್ತಾಯಿಸುತ್ತಿದ್ದಾರೆ. ಆದ್ದರಿಂದ ಮೆಕ್ಕೆಜೋಳದ ಖರೀದಿ ಬಗ್ಗೆ ಸಂಬಂಧಪಟ್ಟ ಸಚಿವರು, ಅಧಿಕಾರಿಗಳೊಂದಿಗೆ ಸಭೆ ನಡೆಸಿ ಚರ್ಚಿಸಲಾಗಿದೆ. ಮಾರುಕಟ್ಟೆಯಲ್ಲಿ ಮೆಕ್ಕೆಜೋಳದ ಬೆಲೆ ಕುಸಿತ ಕಂಡಿದ್ದು, ಉತ್ಪಾದನೆ ಹೆಚ್ಚಾಗಿದೆ. ಸುಮಾರು 55 ಲಕ್ಷ ಮೆಟ್ರಿಕ್ ಟನ್‌ನಷ್ಟು ಮೆಕ್ಕೆಜೋಳವನ್ನು ರೈತರು ಬೆಳೆಯಬಹುದೆಂಬ ಅಂದಾಜಿದೆ. ಕರ್ನಾಟಕವೂ ಸೇರಿದಂತೆ ದೇಶದ ವಿವಿಧ ರಾಜ್ಯಗಳಲ್ಲಿ ಮೆಕ್ಕೆಜೋಳ ಉತ್ಪಾದನೆಯಲ್ಲಿ ಏರಿಕೆ ಕಂಡಿದ್ದರೂ ಸಹ ಕೇಂದ್ರ ಸರ್ಕಾರ ಸುಮಾರು 70 ಲಕ್ಷ ಮೆ.ಟನ್‌ನಷ್ಟು ಮೆಕ್ಕೆಜೋಳವನ್ನು ಆಮದು ಮಾಡಿಕೊಳ್ಳುತ್ತಿದೆ. ಕೇಂದ್ರದ ಈ ನಿರ್ಧಾರದಿಂದ ನೋಡಲ್ ಏಜೆನ್ಸಿಗಳಾದ ನಫೆಡ್, ಎನ್‌ಸಿಸಿಎಫ್ ಸಂಸ್ಥೆಗಳು ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ನಡೆಸದೇ ಇರುವುದರಿಂದ, ರೈತರು ಕೆಲವಡೆ ಧರಣಿ ನಡೆಸುತ್ತಿದ್ದಾರೆ ಎಂದರು.



ಡಿಸ್ಟಿಲರಿಗಳು ಮೆಕ್ಕೆಜೋಳ ಬೆಲೆ ಕಡಿಮೆ ಇದ್ದಾಗಲೇ ಹಿಂದೆಯೇ ಖರೀದಿಸಿ ಶೇಖರಣೆ ಮಾಡಿಕೊಂಡಿವೆ. ಮೆಕ್ಕೆಜೋಳವನ್ನು ನಿಯಮಾನುಸಾರ ಖರೀದಿಸಿ ರೈತರಿಗೆ ಅನುಕೂಲ ಕಲ್ಪಿಸಲು ಡಿಸ್ಟಿಲರಿ ಮಾಲೀಕರೊಂದಿಗೆ ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮೆಕ್ಕೆಜೋಳದ ಬೆಲೆ ಕುಸಿತದಿಂದ ಸಂಕಷ್ಟದಲ್ಲಿರುವ ರೈತರಿಗೆ ಎಲ್ಲ ರೀತಿಯ ಸಹಾಯವನ್ನು ಸರ್ಕಾರ ಮಾಡಲಿದೆ. ರಾಜ್ಯ ಸರ್ಕಾರ, ರೈತರಿಂದ ಸುಮಾರು 10 ಲಕ್ಷ ಮೆ.ಟನ್ ಮೆಕ್ಕೆಜೋಳ ಖರೀದಿಗೆ ಖರೀದಿ ಕೇಂದ್ರ ಸ್ಥಾಪಿಸಲು ಸೂಚನೆ ನೀಡಲಾಗಿದೆ. ದೇಶದಲ್ಲಿಯೇ ಹೇರಳವಾಗಿ ಮೆಕ್ಕೆಜೋಳವನ್ನು ಬೆಳೆದಿದ್ದು, ಅದನ್ನು ಆಮದು ಮಾಡಿಕೊಳ್ಳದಂತೆ ಕೇಂದ್ರ ಸರ್ಕಾರವನ್ನು ಪತ್ರಮುಖೇನ ಕೋರಲಾಗುವುದು ಎಂದರು.

ಈ ಸಂದರ್ಭದಲ್ಲಿ ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ. ಮಹಾದೇವಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೆಕ್ಕೆಜೋಳದ ಜೊತೆಗೆ ಹೆಸರುಕಾಳು ಬೆಳೆ ಸಮಸ್ಯೆ ಬಗ್ಗೆ ಚರ್ಚಿಸಲಾಗಿದ್ದು, ಇದಕ್ಕೆ ಸಂಬಂಧಿಸಿದ ಎಫ್‌ಎಕ್ಯು ಬದಲಾವಣೆಗೆ ಕೇಂದ್ರ ಸರ್ಕಾರ ಮನವಿ ಸಲ್ಲಿಸುವ ಜೊತೆಗೆ ಸಂಬಂಧಪಟ್ಟವರ ತಂಡ ಈ ಬಗ್ಗೆ ದೆಹಲಿಗೂ ಭೇಟಿ ನೀಡಬೇಕೆಂದು ಸೂಚನೆ ನೀಡಲಾಗಿದೆ. ಇತ್ತೀಚೆಗೆ ಪ್ರಧಾನಿಯವರನ್ನು ಭೇಟಿಯಾಗಿ ಮಳೆಯಿಂದಾದ ಬೆಳೆ ಹಾನಿಗೆ ಪರಿಹಾರ ಕೋರಲಾಗಿದೆ. ಈ ಬಾರಿ ರಾಜ್ಯದಲ್ಲಿ ಸುಮಾರು 15.5 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದೆ. ರಾಜ್ಯದ ಮನವಿಗೆ ಕೇಂದ್ರ ಪೂರಕವಾಗಿ ಸ್ಪಂದಿಸಲಿದೆ ಎಂಬ ವಿಶ್ವಾಸವನ್ನು ಮುಖ್ಯಮಂತ್ರಿಗಳು ವ್ಯಕ್ತಪಡಿಸಿದರು.

### ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ಹೋರಾಟಕ್ಕೆ ಸ್ಪಂದಿಸಿದ ಸರ್ಕಾರ । ಪ್ರತಿಭಟನಾ ಸ್ಥಳದಲ್ಲಿ ರೈತರ ವಿಜಯೋತ್ಸವ

# ಕುಮಾರ ಶ್ರೀಗಳ ಉಪವಾಸ ಅಂತ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಂಬಲ ಬೆಲೆಗೆ ಗೋವಿನಜೋಳ ಖರೀದಿಸಬೇಕು ಎಂದು ಲಕ್ಷ್ಮೇಶ್ವರದಲ್ಲಿ ಸಮಗ್ರ ರೈತ ಹೋರಾಟ ಸಂಘಟನೆಗಳ ಒಕ್ಕೂಟ ಮತ್ತು ಮಠಾಧೀಶರ ನೇತೃತ್ವದಲ್ಲಿ ಕಳೆದ ಒಂದು ವಾರದಿಂದ ನಡೆಸುತ್ತಿದ್ದ ಕಠಿಣ ಉಪವಾಸ ಸತ್ಯಾಗ್ರಹದ ಹೋರಾಟಕ್ಕೆ ಸ್ಪಂದಿಸಿದ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದ ಹಿನ್ನೆಲೆಯಲ್ಲಿ ರೈತರು ಧರಣಿ ಸ್ಥಳದಲ್ಲಿ ಸಂಭ್ರಮ ಆಚರಿಸಿದರು.

ಶುಕ್ರವಾರ ಸಿಎಂ ನೇತೃತ್ವದ ತುರ್ತು ಸಭೆ ಕರೆದು ಮೊದಲ ಹಂತದಲ್ಲಿ ರಾಜ್ಯದಲ್ಲಿ 10 ಲಕ್ಷ ಮೆಟ್ರಿಕ್ ಟನ್ ಗೋವಿನಜೋಳವನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲಾಗುವುದು ಎಂಬ ನಿರ್ಧಾರ ಪ್ರಕಟಿಸಿತು. ಈ ನಿರ್ಧಾರದಿಂದ ರೈತರು ನೆಮ್ಮದಿ ನಿಟ್ಟುಸಿರುಬಿಟ್ಟರು.

ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕುಮಾರ ಮಹಾರಾಜ ಶ್ರೀಗಳು ಧರಣಿ ಸ್ಥಳಕ್ಕೆ ಬಂದು ಉಪವಾಸ ಸತ್ಯಾಗ್ರಹ ನಿಲ್ಲಿಸಿದರು. ಈ ಸಂದರ್ಭದಲ್ಲಿ ಸ್ವಾಮೀಜಿ ಅವರ ಪೂರ್ವಾಶ್ರಮದ ತಂದೆ ನಾಗಪ್ಪ, ತಾಯಿ ಶಂಕ್ರವ್ವ ದುಃಖ ಭರಿತರಾಗಿ ಕಣ್ಣಂಚಿನಲ್ಲಿ ನೀರು ತುಂಬಿಕೊಂಡು ಭೇಟಿ ಮಾಡಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು, ಲಕ್ಷ್ಮೇಶ್ವರದಲ್ಲಿ ನಡೆದ ಶ್ರೀಗಳ ನೇತೃತ್ವದ ಹೋರಾಟ ಸರ್ಕಾರದ ಗಮನ ಸೆಳೆದಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಸರ್ಕಾರದೊಂದಿಗೆ ನಿರಂತರ ಪತ್ರ ವ್ಯವಹಾರ ಸಂಪರ್ಕದಲ್ಲಿತ್ತು. ಶುಕ್ರವಾರ ಸಿಎಂ ಸಿದ್ದರಾಮಯ್ಯನವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸಚಿವರು ರೈತರ ಪರಿಸ್ಥಿತಿ ಮನವರಿಕೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಮೊದಲ ಹಂತದಲ್ಲಿ 10 ಲಕ್ಷ ಮೆಟ್ರಿಕ್ ಟನ್ ಗೋವಿನವನ್ನು ಬೆಂಬಲ ಬೆಲೆಯಡಿ ಖರೀದಿಸಲು ಸರ್ಕಾರ ತೀರ್ಮಾನಿಸಿದೆ. ಲಕ್ಷ್ಮೇಶ್ವರದಲ್ಲಿ ಮೊದಲು ಖರೀದಿ ಕೇಂದ್ರ ಕಾರ್ಯಾರಂಭಕ್ಕೆ ಕ್ರಮ ಕೈಗೊಳ್ಳುತ್ತೇವೆ. ದಯವಿಟ್ಟು ಶ್ರೀಗಳು ಉಪವಾಸ ಬಿಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಶ್ರೀಗಳು ಎಳೆನೀರು ಸೇವಿಸಿ ಸಮ್ಮತಿಸಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್ ಮತ್ತು ಉಪವಿಭಾಗಾಧಿಕಾರಿ ಗಂಗಪ್ಪ ಎಂ ಇದ್ದರು.

ಖರೀದಿ ಕೇಂದ್ರ ತೆರೆಯುವ ಕುರಿತು ಸರ್ಕಾರದ ಅಧಿಕೃತ ಆದೇಶ ಪ್ರತಿ ಬರುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಮತ್ತು ಮೊದಲು ಖರೀದಿ ಕೇಂದ್ರ ಹೋರಾಟದ ವೇದಿಕೆಯಲ್ಲಿಯೇ ಉದ್ಘಾಟನೆಯಾಗಬೇಕು. ಅಲ್ಲಿಯವರೆಗೆ ಅಹೋರಾತ್ರಿ ಧರಣಿ ಸತ್ಯಾಗ್ರಹ ಮುಂದುವರೆಸುತ್ತೇವೆ ಎಂಬ ಒಮ್ಮತದ ನಿಲುವನ್ನು ಪ್ರತಿಭಟನಾಕಾರರು ವ್ಯಕ್ತಪಡಿಸಿದರು.

ಈ ವೇಳೆ ಹೋರಾಟದ ನೇತೃತ್ವ ವಹಿಸಿರುವ ಮಂಜುನಾಥ ಮಾಗಡಿ, ರವಿಕಾಂತ ಅಂಗಡಿ ನಾಗರಾಜ ಚಿಂಚಲಿ, ಶರಣು ಗೋಡಿ, ಉಪವಾಸ ನಿರತ ಬಸಣ್ಣ ಬೆಂಡಿಗೇರಿ, ಪೂರ್ಣಾಜಿ ಖರಾಟೆ ವಕೀಲರಾದ ಎಂ.ಎಸ್. ದೊಡ್ಡಗೌಡ್ರ ಮಾತನಾಡಿ, ಈ ಹೋರಾಟದ ಜಯ ಮಠಾಧೀಶರು

▸▸3ನೇ ಪುಟಕ್ಕೆ

ಶುಕ್ರವಾರ ಬೆಳಿಗ್ಗೆಯಿಂದಲೂ ಹೋರಾಟ ಮುಂದುವರೆಸಿದ್ದ ರೈತರು ಬೆಳಿಗ್ಗೆ ಕುಂದಗೋಳ ಶ್ರೀಗಳ ನೇತೃತ್ವದಲ್ಲಿ ಪಾಳಾ-ಬಾದಾಮಿ ರಸ್ತೆಯಲ್ಲಿ ಬಾರಕೋಲು ಚಳುವಳಿ ಮಾಡಿ ಪ್ರತಿಭಟಿಸಿದ್ದರು. ಜೋಗತಿ ಭರಮಮ್ಮ ಬಸಾಪುರ, ನಾಮದೇವ ಮಾಂಡ್ರೆ ಜಾನಪದ ಗೀತೆಗಳ ಮೂಲಕ ಗಮನ ಸೆಳೆದಿದ್ದರು.

## ನ. 22ರಿಂದ ಚಿತ್ರಕಲಾ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಧಾರವಾಡ ವಲಯ ಹಾಗೂ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದೊಂದಿಗೆ 2025ನೇ ಸಾಲಿನ ವಿಶ್ವ ಪರಂಪರೆ ಸಪ್ತಾಹ ಕಾರ್ಯಕ್ರಮವನ್ನು ಗದಗ ಜಿಲ್ಲೆ ಲಕ್ಕುಂಡಿಯಲ್ಲಿ ನ. 22 ರಿಂದ ನ. 25 ರವರೆಗೆ 4 ದಿನಗಳ ಕಾಲ ನಡೆಸಲಾಗುವುದು.

ಸಪ್ತಾಹದ ಅಂಗವಾಗಿ ನ. 22 ರಂದು ಬೆಳಿಗ್ಗೆ ಗದಗನ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಬೆಳಿಗ್ಗೆ 10.30 ಗಂಟೆಗೆ ಕಾರ್ಯಾಗಾರದ ಉದ್ಘಾಟನಾ ಸಮಾರಂಭವು ಜರುಗುವುದು ಹಾಗೂ ಉಪನ್ಯಾಸವಿರುತ್ತದೆ. ನ. 22 ರ ಮಧ್ಯಾಹ್ನ 1.30 ರಿಂದ ನ. 24 ರ ಸಂಜೆ 6 ಗಂಟೆಯವರೆಗೆ ಕಾರ್ಯಕ್ರಮದಲ್ಲಿ ಭಾಗವಹಿಸುವ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಕ್ಷೇತ್ರ ಪರಿವೀಕ್ಷಣೆ ಮತ್ತು ಲಕ್ಕುಂಡಿಯ ವಿವಿಧ ಸ್ಮಾರಕಗಳ ಬಳಿ ವರ್ಣಚಿತ್ರಗಳ ರಚನಾ ಚಟುವಟಿಕೆಯನ್ನು ಹಮ್ಮಿಕೊಳ್ಳಲಾಗಿದೆ.

ನಂತರ ನ. 25 ರಂದು ರಾಜ್ಯ ಪುರಾತತ್ವ ಇಲಾಖೆಯ ವತಿಯಿಂದ ರಾಜ್ಯ ಮಟ್ಟದ ಪ್ರಾಚ್ಯ ಪ್ರಜ್ಞೆ ಕಾರ್ಯಕ್ರಮದಲ್ಲಿ ಪ್ರದರ್ಶಿಸಲಾಗುವುದು.

ಆಯ್ದ ಅತ್ಯುತ್ತಮ 3 ವರ್ಣಚಿತ್ರಗಳಿಗೆ ಪ್ರಶಸ್ತಿ ನೀಡಲಾಗುವುದು. ಹೆಚ್ಚಿನ ವಿವರಗಳಿಗಾಗಿ 9945421305, 9538003455 ಸಂಪರ್ಕಿಸಬಹುದು ಎಂದು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ನಿರ್ದೇಶಕರಾದ ಡಾ. ಸ್ಮಿತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಫಾಯಿ ಕರ್ಮಚಾರಿಗಳಿಗೆ ಅಗತ್ಯ ಸೌಲಭ್ಯ ಒದಗಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಜಾರಿಯಾಗಿರುವ ವಿವಿಧ ಯೋಜನೆಗಳ ಸೌಲಭ್ಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಫಾಯಿ ಕರ್ಮಚಾರಿ, ಮ್ಯಾನುವಲ್ ಸ್ಕ್ಯಾವೆಂಜರ್ ನಿಯೋಜನೆ ನಿಷೇಧ ಮತ್ತು ಅವರ ಪುನರ್ವಸತಿ ಸೌಲಭ್ಯಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಕುರಿತು ಕ್ರಮ ಜರುಗಿಸಬೇಕು. ನೇರವಾಗಿ ಪಾವತಿಸಲಾಗುತ್ತಿರುವ ಪೌರಕಾರ್ಮಿಕರ ವೇತನದಲ್ಲಿ ಭವಿಷ್ಯ ನಿಧಿ ಹಾಗೂ ಇಎಸ್‌ಐ ಕಡಿತಗಳ ಕುರಿತು ಪರಿಶೀಲಿಸಬೇಕು. ಪೌರಕಾರ್ಮಿಕರು ಹಾಗೂ ಅವಲಂಬಿತರಿಗೆ ದೊರಕಬೇಕಾದ ಸೌಲಭ್ಯಗಳು ಹಾಗೂ ಕುಂದುಕೊರತೆ ಕುರಿತು ತಾಲೂಕು ಮಟ್ಟದಲ್ಲಿಯೂ ಸಭೆ ಜರುಗಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ಸಭೆಯಲ್ಲಿ ಪೌರಕಾರ್ಮಿಕರಿಗೆ ಪರಿಕರಗಳ ಬಳಕೆಗಳ ಕುರಿತು ಕಾರ್ಯಾಗಾರ, ಪೌರಕಾರ್ಮಿಕರ ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಧನ, ನಗರಸಭೆಯ ವ್ಯಾಪ್ತಿಯಲ್ಲಿನ ಶೌಚಾಲಯಗಳ ದುರಸ್ತಿ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಜಿಲ್ಲಾ ಸಂಯೋಜಕರಾದ ರಮೇಶ ಕೊಳೂರ, ಸಮಿತಿ ಸದಸ್ಯರಾದ ಯುವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ, ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಡಿ ಗ್ರಾಮ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರ, ಬೆಂಗಳೂರು ಒನ್, ಕೇಂದ್ರಗಳ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಆನ್ ಲೈನ್ ಮತ್ತು ಆಫ್ ಲೈನ್ ಎರಡರಲ್ಲೂ ಸಹ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಆಫ್‌ಲೈನ್ ಅರ್ಜಿಗಳನ್ನು ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಮೇಲ್ಕಾಣಿಸಿದ ಯೋಜನೆಗಳಡಿ ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳು.: ಆಧಾರ್ ಕಾರ್ಡ್, ಆಧಾರ್ ಸೀಡಿಂಗ್ ಆಗಿರುವ ಬ್ಯಾಂಕ್ ಖಾತೆ ಪುಸ್ತಕ, ಯೋಜನಾ ವರದಿ, ಜಾತಿ & ಆದಾಯ, ಚೇತನ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಸಂಸ್ಥೆಯಲ್ಲಿ ನೋಂದಣಿಯಾಗಿರುವ ಪ್ರಮಾಣ ಪತ್ರ, ದೇವದಾಸಿ ಮಹಿಳೆಯರು 1993-94/2007-08 ರಲ್ಲಿ ಸರ್ಕಾರದಿಂದ ನಡೆಸಿದ ಸಮೀಕ್ಷೆಯಲ್ಲಿ ಪಡೆದ ಪ್ರಮಾಣ ಪತ್ರ.

ವಯಸ್ಸಿನ ಮಿತಿ: ಧನಶ್ರೀ ಯೋಜನೆ- 18-60 ವರ್ಷಗಳು, ಚೇತನ ಯೋಜನೆ- 18 ವರ್ಷ ಮೇಲ್ಪಟ್ಟು, ಉದ್ಯೋಗಿನಿ ಯೋಜನೆ- 18-55 ವರ್ಷ. ಈ ಹಿಂದಿನ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೆ ಇರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯ ಇರುವದಿಲ್ಲ. ಅರ್ಜಿ ಸಲ್ಲಿಸಲು ಡಿಸೆಂಬರ್ 15 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಉಪನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾಡಳಿತ ಭವನ ರೂಮ್ ನಂ-06 ಗದಗ. ಇವರನ್ನು ಸಂಪರ್ಕಿಸಬಹುದಾಗಿದೆ.

## ಮನೆ ಕಳ್ಳತನ ಆರೋಪಿಯ ಬಂಧನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೊಲೀಸ್ ಠಾಣಾ ವ್ಯಾಪ್ತಿಯ ಲಕ್ಷ್ಮೇ ನಗರದಲ್ಲಿ ಅಕ್ಟೋಬರ್ ತಿಂಗಳಲ್ಲಿ ಮನೆಯೊಂದರ ಹಿತ್ತಲ ಬಾಗಿಲು ಮುರಿದು ಮನೆಯಲ್ಲಿದ್ದ ಬೆಳ್ಳಿ, ಬಂಗಾರದ ಆಭರಣಗಳನ್ನು ಕಳವು ಮಾಡಿದ್ದ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಅಕ್ಟೋಬರ್ 29ರಂದು ನಡೆದಿದ್ದ ಕಳವಿನ ಪ್ರಕರಣವನ್ನು ದಾಖಲಿಸಿಕೊಂಡಿದ್ದ ಪೊಲೀಸರು ಹೋಟೆಲ್‌ನಲ್ಲಿ ಕೂಲಿ ಕೆಲಸ ಮಾಡುತ್ತಿದ್ದ ಆರೋಪಿ ದ್ಯಾಮಣ್ಣ ಗಂಗಪ್ಪ ಕಂಬಳಿ ಎಂಬುವನನ್ನು ಬಂಧಿಸಿ, ಬಂಧಿತನಿಂದ ಒಟ್ಟು 17 ಗ್ರಾಂ ತೂಕದ ಬಂಗಾರದ ಆಭರಣಗಳು ಹಾಗೂ 55 ಗ್ರಾಂ ಬೆಳ್ಳಿ ಆಭರಣಗಳು ಸೇರಿದಂತೆ ಒಟ್ಟು 125000 ರೂ ಮೌಲ್ಯದ ಆಭರಣಗಳನ್ನು ಜಪ್ತಿ ಮಾಡಿದ್ದಾರೆ. ಈ ಪ್ರಕರಣ ಭೇದಿಸುವಲ್ಲಿ ಎಸ್ಪಿ ರೋಹನ್ ಜಗದೀಶ, ಡಿಎಸ್ಪಿ ಮುರ್ತುಜಾ ಖಾದ್ರಿ ಅವರ ಮಾರ್ಗದರ್ಶನದಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ ನೇತೃತ್ವದಲ್ಲಿ ಪಿಎಸ್‌ಐ ನಾಗರಾಜ ಗಡಾದ, ಟಿ.ಕೆ. ರಾಠೋಡ ಹಾಗೂ ಸಿಬ್ಬಂದಿ ಎಂ.ಎ. ಶೇಖ, ಆರ್.ಎಸ್. ಯರಗಟ್ಟಿ, ಎಂ.ಎಸ್. ಬಳ್ಳಾರಿ, ಎ.ಆರ್. ಕಮ್ಮಾರ, ಎಚ್.ಬಿ. ಗುಡ್ಡಣ್ಣವರ, ಸಿ.ಎಸ್. ಮಠಪತಿ, ಡಿ.ಎಸ್. ನದಾಫ್, ಪಾಂಡುರಂಗರಾವ್, ಎಚ್.ಐ. ಕಲ್ಲನ್ನವರ್, ಎಂ.ಆರ್. ಧಾರವಾಡ, ಎಂ.ಎಸ್. ಅಂಗಡಿ, ಎನ್.ಎಚ್. ಮಠಪತಿ, ಎಎಸ್‌ಐ ಗುರು ಬೂದಿಹಾಳ, ಸಂಜೀವ ಕೊರಡೂರ, ಅಪ್ಪಣ್ಣ ರಾಠೋಡ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಪ್ರಕರಣ ಭೇದಿಸಿದ ತಂಡವನ್ನು ಎಸ್ಪಿ ರೋಹನ್ ಜಗದೀಶ, ಡಿಎಸ್ಪಿ ಮುರ್ತುಜಾ ಖಾದ್ರಿ ಅಭಿನಂದಿಸಿದ್ದಾರೆ.

## ಟ್ರಂಪ್ ಬೆದರಿಕೆ ಬೆನ್ನಲ್ಲೇ ರಷ್ಯಾದಿಂದ ತೈಲ ಆಮದು ನಿಲ್ಲಿಸಿದ ರಿಲಯನ್ಸ್ ಇಂಡಸ್ಟ್ರೀಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಗುಜರಾತ್‌ನ ಜಾಮ್‌ನಗರದಲ್ಲಿರುವ ತನ್ನ ಸಂಸ್ಕರಣಾಗಾರಕ್ಕೆ ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವುದನ್ನು ರಿಲಯನ್ಸ್ ಇಂಡಸ್ಟ್ರೀಸ್ ಗುರುವಾರದಿಂದ (ನವೆಂಬರ್ 20) ನಿಲ್ಲಿಸಿದೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ.

ಮುಕೇಶ್ ಅಂಬಾನಿ ನೇತೃತ್ವದ ರಿಲಯನ್ಸ್ ಕಂಪನಿಗಳ ಸಮೂಹವು, ಉಕ್ರೇನ್ ಮೇಲೆ ರಷ್ಯಾ ದಾಳಿ ನಡೆಸುತ್ತಿರುವ ಹಿನ್ನೆಲೆ, ಪಾಶ್ಚಿಮಾತ್ಯ ದೇಶಗಳು ರಷ್ಯಾದ ಮೇಲೆ ಹೇರಿರುವ ನಿರ್ಬಂಧಗಳನ್ನು ಸಂಪೂರ್ಣವಾಗಿ ಪಾಲಿಸುತ್ತೇವೆ. ಆದರೆ, ಈಗಿರುವ ತೈಲ ಸರಬರಾಜುದಾರರೊಂದಿಗಿನ ಸಂಬಂಧವನ್ನು ಮುಂದುವರಿಸಿಕೊಂಡು ಹೋಗುತ್ತೇವೆ ಹೇಳಿದೆ ಎಂದು ವರದಿ ತಿಳಿಸಿದೆ.

ಉಕ್ರೇನ್‌ನಲ್ಲಿ ಯುದ್ಧ ಪ್ರಾರಂಭವಾದ ಫೆಬ್ರವರಿ 2022ರಿಂದ ಯುನೈಟೆಡ್ ಸ್ಟೇಟ್ಸ್ ಮತ್ತು ಅದರ ಯುರೋಪಿಯನ್ ಮಿತ್ರರಾಷ್ಟ್ರಗಳು ರಷ್ಯಾದ ವ್ಯವಹಾರಗಳ ಮೇಲೆ, ವಿಶೇಷವಾಗಿ ತೈಲ ರಫ್ತುದಾರರ ಮೇಲೆ ಸರಣಿ ನಿರ್ಬಂಧಗಳನ್ನು ವಿಧಿಸಿವೆ.

## ಜ್ಯೋತಿ ಕಬಾಡಿಗೆ 'ಹೆಮ್ಮೆಯ ಕನ್ನಡತಿ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಿಯದರ್ಶಿನಿ ಗ್ರಾಮೀಣಾಭಿವೃದ್ಧಿ ಫೌಂಡೇಶನ್ ಬೆಂಗಳೂರು ವತಿಯಿಂದ ಕರ್ನಾಟಕ ರಾಜ್ಯ ನಾಮಕರಣದ 52ನೇ ವರ್ಷದ ಸುವರ್ಣ ವರ್ಷಾಚರಣೆ ಸಂದರ್ಭದಲ್ಲಿ, 71ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ, ಹೆಮ್ಮೆಯ ಕನ್ನಡಿಗ ಮತ್ತು ಕನ್ನಡತಿ ರಾಷ್ಟ್ರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನ.24ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ.

ಸಮಾರಂಭದಲ್ಲಿ ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ, ಸಾಮಾಜಿಕ ಸೇವೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿದ ಗಣ್ಯ ವ್ಯಕ್ತಿಗಳನ್ನು ಗೌರವಿಸಲಾಗುತ್ತದೆ. ಈ ಸಂದರ್ಭದಲ್ಲಿ ಗದಗ ಜಿಲ್ಲೆಯ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ ಅಧ್ಯಕ್ಷೆ ಜ್ಯೋತಿ ಉಜ್ವಲ್ ಕಬಾಡಿ ಇವರಿಗೆ 'ಹೆಮ್ಮೆಯ ಕನ್ನಡತಿ ರಾಷ್ಟ್ರ ಪ್ರಶಸ್ತಿ' ಪ್ರದಾನ ಮಾಡಲಾಗುವುದು.

ಸಂಸ್ಥೆಯ ಅಧ್ಯಕ್ಷೆ ಸುಮಾ ಎಸ್.ಕವಲ್ದಾರ್ ಕಲಬುರಗಿ, ಕಾರ್ಯದರ್ಶಿ ಸತೀಶ್ ಎನ್.ಜೆ ಬೆಂಗಳೂರು, ಖಜಾಂಚಿ ಅನಸೂಯ ವಿ ಬೆಂಗಳೂರು ಹಾಗೂ ಇತರರು ಈ ಕಾರ್ಯಕ್ರಮದ ಯಶಸ್ಸಿಗಾಗಿ ಶ್ರಮಿಸುತ್ತಿದ್ದಾರೆ.

### ವಿವೇಕಾನಂದ ಸಾಂಸ್ಕೃತಿಕ ಸಮಿತಿಯಿಂದ 'ಜೀವನ ದರ್ಶನ' ಪ್ರವಚನ ಮಾಲಿಕೆ

# ಯುವಕರು ವಿವೇಕದೊಂದಿಗೆ ಸತ್ಪ್ರಜೆಗಳಾಗಿ

■ವಿಜಯಸಾಕ್ಷಿ ಸುದ್ದಿ, ಗದಗ



ಸ್ವಾಮಿ ವಿವೇಕಾನಂದರು ಯುವ ಜನಾಂಗದ ಮನಸ್ಸಿನಲ್ಲಿ ಏಕತೆ, ಐಕ್ಯತೆ ಹಾಗೂ ವಿವೇಕವನ್ನು ತುಂಬುವ ಮೂಲಕ ಅವರಲ್ಲಿ ಭಾರತೀಯ ಸಂಸ್ಕೃತಿ ಸಂಸ್ಕಾರ ಮೂಡಿ ಬರುವಂತೆ ಪ್ರೇರಣೆ ನೀಡಿದವರು. ಯುವಕರು ವಿವೇಕಾನಂದರ ತತ್ವ, ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ವಿವೇಕದೊಂದಿಗೆ ಸತ್ಪ್ರಜೆಗಳಾಗಿ ಬಾಳಬೇಕೆಂದು ಮಲ್ಲಸಮುದ್ರದ ಓಂಕಾರಗಿರಿಯ ಓಂಕಾರೇಶ್ವರ ಮಠದ ಪೂಜ್ಯ ಫಕೀರೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ 'ಜೀವನ ದರ್ಶನ 53ನೇ ಮಾಲಿಕೆ, ಪಾಲಿಕೆ ಸೇವೆ ಮತ್ತು ಕಾರ್ತಿಕ ಮಾಸದ ದೀಪೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ವಿವೇಕ ಎಂದರೆ ಪ್ರಜ್ಞೆ, ಜ್ಞಾನ, ಬೆಳಕು ಎಂದು ಅರ್ಥೈಸಬಹುದು. ವಿವೇಕದ ಮೂಲಕ ಆನಂದವನ್ನು ಕಂಡುಕೊಳ್ಳುವುದೇ ವಿವೇಕಾನಂದ. ಜ್ಞಾನ ಬೆಳಕಿನ ವೇದಿಕೆಯಾದ ಇಲ್ಲಿ ಜೀವನದ ದರ್ಶನವನ್ನು ಮಾಡಿಸಲಾಗುತ್ತಿದೆ. ಮಠಾಧೀಶರು, ಜ್ಞಾನಿಗಳು, ಪಂಡಿತರು, ಉಪನ್ಯಾಸಕರನ್ನು ಆಮಂತ್ರಿಸಿ ಜೀವನಕ್ಕೆ ಬೇಕಾಗುವ ಜ್ಞಾನ ಸನ್ಮಾರ್ಗವನ್ನು ನೀಡುವ 'ಜೀವನ ದರ್ಶನ' ಮಾಲಿಕೆ ನಿರಂತರವಾಗಿ ಸಾಗಿಬರಲು ವಿವೇಕಾನಂದ ನಗರದ ಹಿರಿಯರು, ಸಮಿತಿಯ ಪದಾಧಿಕಾರಿಗಳು ಕಾರಣರಾಗಿದ್ದಾರೆ. ಸಮಾಜಮುಖಿ ಕಾರ್ಯ ಮಾಡುತ್ತಿರುವ ಈ ಸಮಿತಿಯ ಸರ್ವ ಪದಾಧಿಕಾರಿಗಳು ಅಭಿನಂದನಾರ್ಹರು ಎಂದರು.

ಹೆತ್ತ ತಂದೆ-ತಾಯಿ, ಹಿರಿಯರನ್ನು ಪ್ರೀತಿಸುವ, ಗೌರವಿಸುವ ಹಾಗೂ ಮಾರ್ಗದರ್ಶನ ಪಡೆದು ಕಾಯಕ, ದಾಸೋಹ ಮಾಡಬೇಕು ಎಂದ ಅವರು, ಮಕ್ಕಳಿಗೆ ಒಳ್ಳೆಯ ಸಂಸ್ಕಾರ, ಸಂಸ್ಕೃತಿಯನ್ನು ಕಲಿಸಬೇಕು. ಜೊತೆಗೆ ಒಳ್ಳೆಯ ಶಿಕ್ಷಣ ನೀಡಬೇಕು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ 'ಜೀವನ ದರ್ಶನ' ಮಾಲಿಕೆಯ ಮುಖ್ಯ ಉದ್ದೇಶ ಜೀವನ ನಡೆಸುವ ಬಗೆ, ಸಾಧನೆಯ ಬಗೆ, ಸಂಸ್ಕಾರ, ಸಂಸ್ಕೃತಿಯನ್ನು ಯುವ ಜನಾಂಗಕ್ಕೆ ಪರಿಚಯಿಸಿ ಅವರನ್ನು ಸನ್ಮಾರ್ಗದಲ್ಲಿ ಮುನ್ನಡೆಸುವ ಹಿರಿದಾದ ಉದ್ದೇಶದೊಂದಿಗೆ ನಮ್ಮ ಸಮಿತಿ ಪ್ರತಿ ತಿಂಗಳು ಅಮವಾಸ್ಯೆ ದಿನ ಈ ಕಾರ್ಯಕ್ರಮವನ್ನು ನಿರಂತರವಾಗಿ ಮಾಡಿಕೊಂಡು ಬಂದಿದೆ. ಈ ಮಹತ್ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿಕೊಂಡರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಮನುಷ್ಯ ಕಷ್ಟಪಟ್ಟು ದುಡಿಯಬೇಕು. ಪರಿಶ್ರಮದ ದುಡಿಮೆ ಫಲ ನೀಡುವದು ನಿಶ್ಚಿತ. ದೂರದ ಪ್ರಯಾಣ ಸಣ್ಣ ಹೆಜ್ಜೆಯಿಂದ ಆರಂಭಗೊಳ್ಳುವ ಹಾಗೆ ಸಣ್ಣಪುಟ್ಟ ವ್ಯಾಪಾರ ಮಾಡುವ ಮೂಲಕ ವ್ಯಾಪಾರ ವಹಿವಾಟನ್ನು ಹೆಚ್ಚಿಸಿಕೊಳ್ಳುತ್ತ ಹೋಗಬೇಕು. ಆಳಾಗಿ ದುಡಿದು ಅರಸನಾಗಿ ಉಣ್ಣಬೇಕು ಎಂಬ ಹಿರಿಯರ ಮಾತಿನಂತೆ ಸಾಧನೆಗೆ ಪ್ರಯತ್ನ ಬೇಕು ಎಂದರು.

ವೇದಿಕೆಯ ಮೇಲೆ ಸಮಿತಿಯ ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕಾಶೀವಿಶ್ವನಾಥನ ಪಾಲಕಿ ಸೇವೆ ಮತ್ತು ಕಾರ್ತಿಕ ಮಾಸದ ದೀಪೋತ್ಸವವು ಸಕಲ ಸದ್ಭಕ್ತರಿಂದ ಶೃದ್ಧಾಭಕ್ತಿಯೊಂದಿಗೆ ಜರುಗಿತು.

ಸವಿತಾ ಗುಡ್ಡದ, ಕಸ್ತೂರಿ ಕಮ್ಮಾರ ಮತ್ತು ಸಂಗಡಿಗರಿಂದ ಸುಮಧುರ ಸಂಗೀತ ಜರುಗಿತು. ಕಸ್ತೂರಿಬಾಯಿ ಕಮ್ಮಾರ, ವಿಶಾಲಾಕ್ಷೀ ಕಲ್ಲನಗೌಡರ ಪ್ರಾರ್ಥಿಸಿದರು. ಸಮಿತಿಯ ಕಾರ್ಯದರ್ಶಿ ಕೆ.ಪಿ. ಗುಳಗೌಡ್ರ ಸ್ವಾಗತಿಸಿದರು. ವ್ಹಿ.ಕೆ. ಗುರುಮಠ ಪರಿಚಯಿಸಿದರು. ಕೋಶಾಧ್ಯಕ್ಷ ಎಸ್.ಎಸ್. ಪಾಳೇಗಾರ ನಿರೂಪಿಸಿದರು. ಸಂಗೀತಾ ಕುರಿ ವಂದಿಸಿದರು.

ಸಮಾರಂಭದಲ್ಲಿ ಸಮಿತಿಯ ನಿರ್ದೇಶಕರಾದ ಆರ್.ಬಿ. ಅಂದಪ್ಪನವರ, ವ್ಹಿ.ಆರ್. ಗೊಬ್ಬರಗುಂಪಿ, ಸಾಗರ ಬಿಂಗಿ, ರೇಣುಕಾ ಕರಿಗೌಡರ, ಸಂಗೀತಾ ಕುರಿ ಅಲ್ಲದೆ ಸಿ.ಕೆ. ಕಡಣಿ, ರಾಜೇಂದ್ರ ಗಡಾದ, ಎಸ್.ಎಸ್. ಪಾಟೀಲ, ಎಂ.ಬಿ. ಚನ್ನಪ್ಪಗೌಡ್ರ, ಕೆ.ಐ. ಕುರಗೋಡ, ವೀರಣ್ಣ ಕೊಟಗಿ, ಸುದರ್ಶನ ಹಾನಗಲ್ಲ, ಎಂ.ಕೆ. ತುಪ್ಪದ, ವ್ಹಿ.ಆರ್. ಗೊಬ್ಬರಗುಂಪಿ, ಬಿ.ಎಚ್. ಗರಡಿಮನಿ, ಎಂ.ಎನ್. ಕಾಮನಹಳ್ಳಿ, ಐ.ಬಿ. ಮೈದರಗಿ ಮುಂತಾದವರು ಪಾಲ್ಗೊಂಡಿದ್ದರು.

## 'ನಾನು ಬೌದ್ಧಧರ್ಮವನ್ನು ಅನುಸರಿಸುತ್ತೇನೆ, ಆದರೆ ಎಲ್ಲಾ ಧರ್ಮಗಳನ್ನು ಗೌರವಿಸುತ್ತೇನೆ': ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನಾನು ಬೌದ್ಧಧರ್ಮವನ್ನು ಅನುಸರಿಸುತ್ತೇನೆ, ಆದರೆ ನಾನು ನಿಜವಾಗಿಯೂ ಜಾತ್ಯತೀತ ಎಂದು ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ತಮ್ಮ ವಿದಾಯ ಭಾಷಣದಲ್ಲಿ ಹೇಳಿದ್ದಾರೆ. ಸುಪ್ರೀಂ ಕೋರ್ಟ್‌ನ ಕೋರ್ಟ್ ನಲ್ಲಿ, ಸುಪ್ರೀಂ ಕೋರ್ಟ್ ಅಡ್ವೊಕೇಟ್ಸ್ ಆನ್ ರೆಕಾರ್ಡ್ಸ್ ಅಸೋಸಿಯೇಷನ್ (SCAORA) ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ, ನವೆಂಬರ್ 20 ರಂದು ತಮ್ಮ ಕೊನೆಯ ಕೆಲಸದ ದಿನಕ್ಕೂ ಮುನ್ನ ಸಿಜೆಐ ಗವಾಯಿ ಈ ಹೇಳಿಕೆಗಳನ್ನು ನೀಡಿದ್ದಾರೆ.

## ಉಡುಪಿ । ಪಾಕಿಸ್ತಾನಕ್ಕೆ ನೌಕಾಪಡೆಯ ರಹಸ್ಯ ಮಾಹಿತಿ ರವಾನೆ; ಆರೋಪಿಗಳಾದ ರೋಹಿತ್, ಸಂತ್ರಿ ಬಂಧನ

■ವಿಜಯಸಾಕ್ಷಿ ಸುದ್ದಿ, ಉಡುಪಿ

ಭಾರತೀಯ ನೌಕಾಪಡೆಗೆ ಸಂಬಂಧಿಸಿದ ರಹಸ್ಯ ಮಾಹಿತಿಗಳನ್ನು ವಾಟ್ಸಾಪ್ ಹಾಗೂ ಫೇಸ್‌ಬುಕ್ ಮೂಲಕ ಅನಧಿಕೃತವಾಗಿ ಶೇರ್ ಮಾಡಿ, ಅಕ್ರಮ ಲಾಭ ಪಡೆದಿರುವ ಕೊಚ್ಚಿನ್ ಶಿಪ್ ಯಾರ್ಡ್‌ನ ಇಬ್ಬರು ನೌಕರರನ್ನು ಉಡುಪಿ ಪೊಲೀಸರು ಗುರುವಾರ (ನವೆಂಬರ್ 20) ಬಂಧಿಸಿದ್ದಾರೆ ಎಂದು ವರದಿಯಾಗಿದೆ.

ಉತ್ತರ ಪ್ರದೇಶದ ಸುಲ್ತಾನಪುರ ಜಿಲ್ಲೆಯ ರೋಹಿತ್ ಮತ್ತು ಸಂತ್ರಿ ಬಂಧಿತ ಆರೋಪಿಗಳು. ಇವರು ಸುಷ್ಮಾ ಮೆರೈನ್ ಪ್ರೈವೇಟ್ ಲಿಮಿಟೆಡ್ ಮೂಲಕ ಮಲ್ಪೆಯ ಕೊಚ್ಚಿನ್ ಶಿಪ್‌ಯಾರ್ಡ್‌ನಲ್ಲಿ ಒಪ್ಪಂದದ ಮೇಲೆ ಕೆಲಸ ಮಾಡುತ್ತಿದ್ದರು.

ಪೊಲೀಸರ ಮಾಹಿತಿ ಪ್ರಕಾರ, ಈ ಇಬ್ಬರು ಆರೋಪಿಗಳು ಕಳೆದ 18 ತಿಂಗಳಿಗೂ ಹೆಚ್ಚು ಸಮಯದಿಂದ ಶಿಪ್‌ಯಾರ್ಡ್ ಗೌಪ್ಯ ಮಾಹಿತಿಗಳನ್ನು ಹಂಚಿಕೊಂಡಿದ್ದಾರೆ.

### ಗೋಶಾಲೆಯಲ್ಲಿ ಗರ್ಭಿಣಿ ಗೋಮಾತೆಗೆ ಸೀಮಂತ ಕಾರ್ಯಕ್ರಮ

# ಮೂರು ಗೋಮಾತೆಯ ಕರುಗಳಿಗೆ ನಾಮಕರಣ



ಗೋ ಸಂತತಿ ಉಳಿಯಬೇಕು, ಗೋ ಸಂರಕ್ಷಣೆ ಆಗಬೇಕು, ಗೋವಿನ ಹಾಲು, ಬೆಣ್ಣೆ, ಮೂತ್ರ, ಸಗಣೆಯಿಂದ ಮಾನವನಿಗೆ ಉಪಯುಕ್ತ ಸಾಮಗ್ರಿಗಳ ಉತ್ಪಾದನೆ ಹೆಚ್ಚಾಗಬೇಕೆಂಬ ಉದ್ದೇಶವಿದೆ. ಬರಲಿರುವ ದಿನಗಳಲ್ಲಿ ಈ ಬಗ್ಗೆ ಇನ್ನಷ್ಟು ಜಾಗೃತಿ ಮೂಡಿಸಲಾಗುವದು.

**– ರವಿ ಹಡಪದ.**
ಟ್ರಸ್ಟ್ ಕಾರ್ಯದರ್ಶಿ.

■ವಿಜಯಸಾಕ್ಷಿ ಸುದ್ದಿ, ಗದಗ

ಗರ್ಭಿಣಿ ಗೋಮಾತೆಗೆ ಶೃದ್ಧಾ-ಭಕ್ತಿಯಿಂದ ಪೂಜಿಸಿ ಸೀಮಂತ ಕಾರ್ಯಕ್ರಮದೊಂದಿಗೆ ಮೂರು ಗೋಮಾತೆಯ ಕರುಗಳಿಗೆ ನಾಮಕರಣ ಮಾಡುವ ಮೂಲಕ ಗೋಮಾತೆಯನ್ನು ಸಂರಕ್ಷಿಸಿ ಎಂಬ ಭಕ್ತಿ ಭಾವ ಸ್ಫುರಿಸುವ ವಿಶಿಷ್ಟ ಕಾರ್ಯಕ್ರಮವು ಗದುಗಿನ ಹೊರವಲಯದಲ್ಲಿರುವ ಗಂಗಿಮಡಿ ಪ್ರದೇಶದ ಹಿರೇಹಂದಿಗೋಳ ಮಾರ್ಗದ ಗೋಶಾಲೆಯಲ್ಲಿ ಶುಕ್ರವಾರ ಜರುಗಿತು.

ಗೋ-ಸೇವಾ ಗತಿ ವಿಧಿ ಉತ್ತರ ಪ್ರಾಂತ ಮತ್ತು ಗೋ-ಜೈವಿಕ ಕೃಷಿ ಅನುಸಂಧಾನ ಕೇಂದ್ರ ಟ್ರಸ್ಟ್ ಗದಗ ಇವರ ಸಹಯೋಗದೊಂದಿಗೆ ವಿವಿಧ ಮಹಿಳಾ ಸಂಘಟನೆಗಳು ಈ ಕೈಂಕರ್ಯಕ್ಕೆ ಕೈಜೋಡಿಸಿವೆ.

ಗೋಶಾಲಾದ ಶುಚಿಗೊಳಿಸಿದ ದೇವಣಿ, ಗೀರ್ ತಳಿಯ ಗರ್ಭಿಣಿ ಗೋಮಾತೆಯನ್ನು ಮುತ್ತೈದೆಯರು ಕುಂಭದೊಂದಿಗೆ ತಳಿರು ತೋರಣಗಳಿಂದ ಅಲಂಕೃತಗೊಳಿಸಿದ್ದ ಮಂಟಪಕ್ಕೆ ಬರಮಾಡಿಕೊಂಡರು. ಈ ಗೋಮಾತೆಗೆ ಪಾದಪೂಜೆ ಮಾಡಿ ಕುಂಕುಮ, ಅರಿಷಿಣ ಹಚ್ಚಿ ಸೀರೆ ಉಡಿಸಿ, ಉಡಿ ತುಂಬಿ ಬೆಲ್ಲ, ಅಕ್ಕಿಯೊಂದಿಗೆ ಪಶು ಆಹಾರ ನೀಡಿ ನಮಿಸಿದರು.

ಅಲಂಕೃತ ತೊಟ್ಟಿಲದಲ್ಲಿ ಒಂದರ ನಂತರ ಒಂದರಂತೆ ಗೋಶಾಲೆಯ ಮೂರು ಗೋಮಾತೆಯ ಕರುಗಳಿಗೆ ಬಸವ, ಕೃಷ್ಣೆ, ಗೌರಿ ಎಂದು ನಾಮಕರಣ ಮಾಡಿ ಮುತ್ತೈಯರು ಜೋಗುಳ ಹಾಡಿ ಸಂಭ್ರಮಿಸಿದರು.

ಮಹಿಳಾ ಪ್ರಮುಖರಾದ ರಜನಿ ಪಂಥರ, ನಾಗವೇಣಿ ಕಟ್ಟಿಮನಿ, ಅಶ್ವಿನಿ ಜಗತಾಪ, ವೀಣಾ ಕಾವೇರಿ, ರಂಜನಾ ಕೋಟಿ, ವಿಜಯಾ ನವಲೆ ಮುಂತಾದವರ ನೇತೃತ್ವದಲ್ಲಿ ಸುಮಾರು 60ಕ್ಕೂ ಹೆಚ್ಚು ಮುತ್ತೈದೆಯರು ಕುಂಭದೊಂದಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಎಲ್ಲರಿಗೂ ಉಡಿ ತುಂಬಿ ಗೌರವಿಸಲಾಯಿತು. ಟ್ರಸ್ಟ್ ಕಾರ್ಯದರ್ಶಿ ರವಿ ಹಡಪದ, ಆರ್.ಎಸ್.ಎಸ್ ಪ್ರಮುಖರಾದ ನರಸಿಂಹ ಕಾಮಾರ್ತಿ, ಮೋಹನ ಮಾಳಶೆಟ್ಟಿ, ಗುರುಸಿದ್ದಪ್ಪ ಕೊಣ್ಣೂರ, ಚೇತನ್ ಮೇಹರವಾಡೆ ಸೇರಿದಂತೆ ಪ್ರಮುಖರು ಪಾಲ್ಗೊಂಡಿದ್ದರು.

## ಹಜರತ್ ಟಿಪ್ಪು ಸುಲ್ತಾನ್ ಜಯಂತ್ಯುತ್ಸವ




■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಗದಗ ಜಿಲ್ಲಾ ಘಟಕದಿಂದ ಮೈಸೂರು ಹುಲಿ ಹಜರತ್ ಟಿಪ್ಪು ಸುಲ್ತಾನ್ ಜಯಂತ್ಯುತ್ಸವವನ್ನು ಅವರ ನಾಮಫಲಕಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು.

ಮಹಾಸಭಾದ ಗದಗ ಜಿಲ್ಲಾ ಉಸ್ತುವಾರಿ ಎಂ.ಡಿ. ಜಾಫರ್ ಡಾಲಾಯತ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ, ನಗರಸಭೆಯ ಸದಸ್ಯ ಜೂನ್‌ಸಾಬ್ ನಮಾಜಿ, ಕಾಂಗ್ರೆಸ್ ಅಲ್ಪಸಂಖ್ಯಾತರ ಜಿಲ್ಲಾ ಘಟಕದ ಅಧ್ಯಕ್ಷ ಉಮರ ಫಾರೂಕ್ ಹುಬ್ಬಳ್ಳಿ, ಅಂಜುಮನ್ ಕಮಿಟಿ ಮಾಜಿ ಅಧ್ಯಕ್ಷ ಯೂಸುಫ್ ನಮಾಜಿ, ಮೆಹಬೂಬ್ ಮುಲ್ಲಾ, ರಹಿಂಸಾಬ್ ದೊಡ್ಡಮನಿ, ಬಾಬಾಜಾನ ಬಳಗಾನೂರ, ಚಾಂದಸಾಬ್ ಕೊಟ್ಟೂರ, ಮೊಹಮ್ಮದ್ ಅಸ್ಲಮ ದಂಡಿನ, ಇಮ್ತಿಯಾಜ್ ಪಠಾಣ ಮುಂತಾದವರು ಉಪಸ್ಥಿತರಿದ್ದರು.

## ಶೈಕ್ಷಣಿಕ ಅಭಿವೃದ್ಧಿಗೆ ಅಂಗನವಾಡಿ ಪೂರಕ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಅಂಗನವಾಡಿ ಕೇಂದ್ರಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಬಸವರಾಜ ಹಾರೋಗೇರಿ ಹೇಳಿದರು.

ಅವರು ಪಟ್ಟಣದ ವಾರ್ಡ್ ನಂ. 11 ಮತ್ತು 12ರ ಅಂಗನವಾಡಿ ಸಂಖ್ಯೆ 141ರಲ್ಲಿ ಅಂಗನವಾಡಿಯ 50ನೇ ವರ್ಷದ ಸುವರ್ಣ ಸಂಭ್ರಮಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮೊದಲ ಪಾಠಶಾಲೆ ಮನೆಯಾದರೆ, ನಂತರದ ಪೂರ್ವ ಪ್ರಾಥಮಿಕ ಶಾಲೆ ಅಂಗನವಾಡಿಯಾಗಿದೆ. ಇಂದು ಅಂಗನವಾಡಿ ಕೇಂದ್ರದಲ್ಲಿ ಸರಕಾರದ ಸಾಕಷ್ಟು ಸೌಲಭ್ಯಗಳಿದ್ದು, ಈಗ ಅಂಗನವಾಡಿಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಪಾಲಕರು ಮಕ್ಕಳನ್ನು ತಪ್ಪದೇ ಅಂಗನವಾಡಿಗಳಿಗೆ ಕಳಿಸಬೇಕು. ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

ಈ ಸಂದರ್ಭದಲ್ಲಿ ಬೀಬಿಜಾನ ಶೇಖ, ಶೋಭಾ ದಿವಟರ, ಸುಧಾ ವಡ್ನಕೊಪ್ಪ, ಗಂಗಮ್ಮಾ ಹೊರಪೇಟಿ, ಶ್ರೀದೇವಿ ದಿವಟರ, ರಾಜೇಶ್ವರಿ ಸಂಗನಪೇಟಿ, ದಾವಲಬಿ ಶೇಖ, ರವಿ ಹೊರಪೇಟಿ, ಪಾತೀಮಾ ಶೇಖ, ಖುಕ್ಸಾನಾ ಕಿಂಡ್ರಿ, ಅಂಗನವಾಡಿ ಶಿಕ್ಷಕಿ ಸವಿತಾ ಮಾಡಳ್ಳಿ, ಕಾರ್ಯಕರ್ತೆ

### ಗದಗ ಜಿಲ್ಲಾಡಳಿತ ಭವನದಲ್ಲಿ ಎಸ್‌ಸಿ-ಎಸ್‌ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ

# ದೌರ್ಜನ್ಯ ತಡೆಯುವ ಜವಾಬ್ದಾರಿ ನಮ್ಮೆಲ್ಲರದು

■ವಿಜಯಸಾಕ್ಷಿ ಸುದ್ದಿ, ಗದಗ



ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ಕೇವಲ ಪುಸ್ತಕದಲ್ಲಿರಬಾರದು. ಅದರ ಅನುಷ್ಠಾನದ ಜವಾಬ್ದಾರಿ ನಮ್ಮ ಮೇಲಿದೆ. ದೌರ್ಜನ್ಯ ಪೀಡಿತರ ಮನಸ್ಸಿನಲ್ಲಿ ಭಯವಲ್ಲ, ಭರವಸೆ ಮೂಡುವಂತೆ ಪೊಲೀಸ್ ಮತ್ತು ಆಡಳಿತ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗುರುವಾರ ಜರುಗಿದ ಗದಗ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಸೂಕ್ತ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕಳೆದ ಕೆಲವು ತಿಂಗಳಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ, ಪ್ರಾಥಮಿಕ ತನಿಖೆಯ ಹಂತ, ಚಾರ್ಜ್‌ಶೀಟ್ ಸಲ್ಲಿಕೆ, ನ್ಯಾಯಾಲಯಗಳಲ್ಲಿ ವಿಚಾರಣೆ ಹಂತದಲ್ಲಿರುವ ಪ್ರಕರಣಗಳ ವಿವರಗಳನ್ನು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ನಂದಾ ಹಣಬರಟ್ಟಿ ಸಭೆಗೆ ಮಂಡಿಸಿದರು.

ಎಸ್‌ಸಿ/ಎಸ್‌ಟಿ ಕಾಯ್ದೆ, ಪರಿಹಾರ ನಿಬಂಧನೆಗಳು, ದೂರನ್ನು ಹೇಗೆ ಸಲ್ಲಿಸಬೇಕು, ಯಾರನ್ನು ಸಂಪರ್ಕಿಸಬೇಕು ಎಂಬ ವಿಷಯದಲ್ಲಿ ಜನರಿಗೆ ತಿಳುವಳಿಕೆ ಕೊಡಿ. ಶಾಲೆ-ಕಾಲೇಜುಗಳಲ್ಲಿ ಸಂವಿಧಾನ ಮೌಲ್ಯಗಳ ಕುರಿತು ವಿಶೇಷ ವ್ಯಾಖ್ಯಾನ ಕಾರ್ಯಕ್ರಮಗಳನ್ನು ನಡೆಸಿ, ಜಾತಿ ಆಧಾರಿತ ದ್ವೇಷ ತಡೆಯುವ ಮನೋಭಾವ ಬೆಳೆಸಬೇಕು ಎಂದು ಡಿಸಿ ಸಿ.ಎನ್. ಶ್ರೀಧರ ಹೇಳಿದರು.

ಪ.ಜಾ ಪ.ಪಂ ಜನರಿಗೆ ತಲುಪಬೇಕಾದ ವಸತಿ, ವೈದ್ಯಕೀಯ, ಶಿಕ್ಷಣ ಸೇರಿದಂತೆ ವಿವಿಧ ಸೌಲಭ್ಯಗಳು ಅರ್ಹರಿಗೆ ಸಕಾಲದಲ್ಲಿ ದೊರಕಬೇಕು. ಹೊಂಬಳ ನಾಕಾದ ಸ್ಮಶಾನ ಭೂಮಿಯಲ್ಲಿ ಬೆಳೆದಿರುವ ಮುಳ್ಳಿನ ಕಂಟಿಗಳನ್ನು ತೆಗೆದು ಸ್ವಚ್ಛಗೊಳಿಸಿ ವಿದ್ಯುತ್ ದೀಪದ ವ್ಯವಸ್ಥೆ ಕಲ್ಪಿಸಬೇಕು. ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಗೆ ಅಧಿಕಾರಿಗಳು ತಪ್ಪದೇ ಸಕಾಲದಲ್ಲಿ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ದೂರನ್ನು ಸ್ವೀಕರಿಸುವ ಪೊಲೀಸ್ ಠಾಣೆ, ತಹಸೀಲ್ದಾರ ಕಚೇರಿ, ಸಮಾಜ ಕಲ್ಯಾಣ ಕಚೇರಿ ಮುಂತಾದ ಕಡೆಗಳಲ್ಲಿ ದೂರವಾಣಿ ಸಂಖ್ಯೆಗಳು, ತುರ್ತು ಸಂಪರ್ಕ ವಿವರಗಳನ್ನು ಗೋಚರವಾಗುವಂತೆ ಅಂಟಿಸುವಂತೆ ಸೂಚಿಸಲಾಯಿತು. ಸಮಿತಿಯ ಸದಸ್ಯರ ಕೋರಿಕೆಯ ಮೇರೆಗೆ ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ಸಹ ದೌರ್ಜನ್ಯ ನಿಯಂತ್ರಣ ಸಭೆಗಳು ಆಗಬೇಕು, ಈ ಬಗ್ಗೆ ಸಮಾಜ ಕಲ್ಯಾಣ ಅಧಿಕಾರಿಗಳು ಕ್ರಮ ವಹಿಸಲು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರುಗಳಾದ ಶರೀಫ್ ಬಿಳೆಯಲಿ, ಸುರೇಶ ನಡುವಿನಮನಿ, ವಿನಾಯಕ ಬಳ್ಳಾರಿ, ತುಕ್ಕಪ್ಪ ಪೂಜಾರ, ಶ್ರೀನಿವಾಸ ದ್ಯಾವನೂರ, ದೃವರಾಜ ಹೊನ್ನಪ್ಪನವರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಮಹಬೂಬ ತುಂಬರಮಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಡಿಎಚ್‌ಒ ಡಾ. ಎಸ್. ಎಸ್. ನೀಲಗುಂದ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧಿಕಾರಿ ಶರಣು ಗೋಗೆರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ನಿರಾಶ್ರಿತರ ತುರ್ತು ಆರೈಕೆ, ಚೇತರಿಕೆ ಕೇಂದ್ರ ಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ಗದಗ




ಜಿಲ್ಲೆಯಲ್ಲಿ ಮಾನಸಿಕ ಅಸ್ವಸ್ಥತೆ ಹೊಂದಿರುವ ನಿರಾಶ್ರಿತರಿಗೆ ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರವನ್ನು ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಆಸ್ಪತ್ರೆ ಮಲ್ಲಸಮುದ್ರ ಗದಗದಲ್ಲಿ ಕೊಠಡಿ ಸಂಖ್ಯೆ: 232ರಲ್ಲಿ ಸ್ಥಾಪನೆಗೊಂಡಿದೆ.

ಇದೊಂದು ಕರ್ನಾಟಕ ಸರ್ಕಾರ ಹಾಗೂ ನಿಮ್ಹಾನ್ಸ್ ಸಂಸ್ಥೆ ಆಲದಮರ ಫೌಂಡೇಶನ್, ಸಾರಥಿ ಸಂಸ್ಥೆ ಹಿರೇಹಂದಿಗೋಳ, ಗದಗ ಇವರ ಸಹಯೋಗದೊಂದಿಗೆ ಉಚಿತವಾಗಿ ಮಾನಸಿಕವಾಗಿ ಬಳಲುತ್ತಿರುವ ಬೀದಿಗಳಲ್ಲಿ ಗುರಿಯಿಲ್ಲದೆ ಅಲೆದಾಡುತ್ತಿರುವ ನಿರಾಶ್ರಿತರಿಗಾಗಿ ತುರ್ತುಚಿಕಿತ್ಸೆಯನ್ನು ಹಾಗೂ ಅಸ್ವಸ್ಥತೆಗೊಂಡಿರುವಂತಹ ರೋಗಿಗಳಿಗಾಗಿ ಉತ್ತಮ ಗುಣಮಟ್ಟದ ಚಿಕಿತ್ಸೆಯನ್ನು ಸಂಪೂರ್ಣ ಉಚಿತವಾಗಿ ಮನೋವೈದ್ಯರಿಂದ ನೀಡಲಾಗುವುದು. ಮತ್ತು ಗುಣಮುಖವಾಗುವರೆಗೂ ಉಚಿತ ಊಟ ಹಾಗೂ ಆರೈಕೆ ಔಷದೋಪಚಾರವನ್ನು ನೀಡಲಾಗುವುದು ಗುಣಮುಖ ಹೊಂದಿದವರನ್ನು ವಿಳಾಸ ಹಾಗೂ ಸಂಬಂಧಿಕರ ಮಾಹಿತಿಯನ್ನು ಪಡೆದು ಅವರಲ್ಲಿ ತಲುಪಲು ನೇರವಾಗುವುದಕ್ಕೆ ಈ ಕೇಂದ್ರ ಸಹಾಯವನ್ನು ಮಾಡಲಾಗುವುದು.

ಗದಗ ಜಿಲ್ಲೆಯಲ್ಲಿ ತುರ್ತು ಚಿಕಿತ್ಸೆ ಹಾಗೂ ಆರೈಕೆ ಕೇಂದ್ರ ಸ್ಥಾಪನೆಗೊಂಡಿದ್ದು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿಗಳು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನ. 24ರಿಂದ ಶಿರಹಟ್ಟಿಯಲ್ಲಿ ಪಿಎಸ್‌ಐ ಈರಣ್ಣ ರಿತ್ತಿ ವರ್ಗಾವಣೆಗೆ ಆಗ್ರಹಿಸಿ ಅನಿರ್ದಿಷ್ಟ ಧರಣಿ**

# ರಕ್ಷಕರೇ ಭಕ್ಷಕರಾದರೆ ರಕ್ಷಣೆ ಯಾರಿಂದ?

■ ವಿಜಯಸಾಕ್ಷಿ ಸುದ್ದಿ, ಗದಗ




ಮುಗ್ಧ ರೈತನ ಮೇಲೆ ತೀವ್ರ ಹಲ್ಲೆ ನಡೆಸಿ ಸಹಸ್ರಾರು ರೂಪಾಯಿಗಳನ್ನು ಎಗರಿಸಿರುವ ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ನ. 24ರಿಂದ ಶಿರಹಟ್ಟಿ ತಹಸೀಲ್ದಾರ ಕಚೇರಿಯ ಆವರಣದಲ್ಲಿ ನೂರಾರು ಜನ ಹಿಂದೂ ಬಾಂಧವರು, ರೈತರು ಅನಿರ್ದಿಷ್ಟಾವಧಿ ಧರಣಿ ನಡೆಸಲಿದ್ದಾರೆ ಎಂದು ಹಿಂದೂ ಸಂಘಟನೆಗಳ ಹೋರಾಟಗಾರ ರಾಜೂ ಖಾನಪ್ಪನವರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ ಕಳೆದ 15 ದಿನಗಳ ಹಿಂದೆ ಜಮೀನಿನಿಂದ ಮನೆಗೆ ವಾಪಸ್ಸು ಬರುತ್ತಿದ್ದ ರೈತ ಸೋಮಪ್ಪ ಬೂದಪ್ಪ ಲಮಾಣಿ ಎಂಬುವವರ ಮೇಲೆ ತೀವ್ರ ಹಲ್ಲೆ ನಡೆಸಿದ್ದಾರೆ. ತಮ್ಮ ಮೇಲೆ ಏಕೆ ಹಲ್ಲೆ ನಡೆಸುತ್ತಿದ್ದೀರೆಂದು ಪ್ರಶ್ನಿಸಿದ ಸೋಮಪ್ಪ ಲಮಾಣಿ ಬಳಿ ಇದ್ದ 32 ಸಾವಿರ ರೂಪಾಯಿಗಳನ್ನು ಕಸಿದುಕೊಂಡು ಇಸ್ಪೀಟಾಟದಲ್ಲಿ ತೊಡಗಿದ್ದಂತೆ ಪ್ರಕರಣ ದಾಖಲಿಸಿದ್ದಾರೆಂದು ಆರೋಪಿಸಿದರು.

ಜಮೀನಿನಿಂದ ಮನೆಗೆ ತೆರಳುತ್ತಿದ್ದ ವ್ಯಕ್ತಿಯ ಮೇಲೆ ದೌರ್ಜನ್ಯ ನಡೆಸಿ ಹಣ ಕಸಿದುಕೊಂಡದ್ದನ್ನು ಪ್ರಶ್ನಿಸಿದ್ದಕ್ಕೆ ಪಿಎಸ್‌ಐ ಈರಣ್ಣ ರಿತ್ತಿ ಸೋಮಪ್ಪ ಲಮಾಣಿಗೆ ಮನಬಂದಂತೆ ಬೈದು ಜಾತಿ ನಿಂದನೆ ಮಾಡಿದ್ದಾರೆ. ಓರ್ವ ಪೊಲೀಸ್ ಅಧಿಕಾರಿಯೇ ವಿನಾಕಾರಣ ರೈತರ ಮೇಲೆ ಹಲ್ಲೆ ನಡೆಸಿ ಜಾತಿ ನಿಂದನೆ ಮಾಡಿದಲ್ಲಿ ಯಾರ ಬಳಿ ನ್ಯಾಯ ಕೇಳಬೇಕೆಂದು ಪ್ರಶ್ನಿಸಿದರು.

ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಈ ಹಿಂದೆ ಅನೇಕ ವರ್ಷಗಳ ಕಾಲ ಶಿರಹಟ್ಟಿ ಪಿಎಸ್‌ಐ ಆಗಿಯೇ ಕಾರ್ಯನಿರ್ವಹಿಸಿದ್ದಾರೆ.

ಶಿರಹಟ್ಟಿ ತಾಲೂಕಿನಲ್ಲಿನ ಆಕ್ರಮಗಳಿಂದಾಗಿ ಪ್ರತಿ ತಿಂಗಳೂ ಯಥೇಚ್ಛವಾಗಿ ಅಕ್ರಮ ಹಣ ಸಂಪಾದಿಸುತ್ತಿರುವ ಈರಣ್ಣ ರಿತ್ತಿ ಶಿರಹಟ್ಟಿ ತಾಲೂಕ ಬಿಟ್ಟು ಕದಲಲು ತಯಾರಿಲ್ಲ. ಕಳೆದ ವರ್ಷದ ವಿಜಯದಶಮಿಯಂದು ಲಕ್ಷ್ಮೇಶ್ವರದ ಪಿಎಸ್‌ಐ ಆಗಿದ್ದ ಸಂದರ್ಭದಲ್ಲಿ ಶಾಂತಿಯುತವಾಗಿ ದುರ್ಗಾ ಮೂರ್ತಿಯನ್ನು ವಿಸರ್ಜಿಸಿ ಮನೆಗೆ ತೆರಳುತ್ತಿದ್ದ ಮುಗ್ಧ ಗೋಸಾವಿ ಜನಾಂಗದ ಮೇಲೆ ಲಾಠಿಯಿಂದ ಥಳಿಸಿದ್ದರು. ಈ ಘಟನೆಯನ್ನು ಖಂಡಿಸಿ ತಹಸೀಲ್ದಾರ ಕಚೇರಿ ಮುಂದೆ ಹಿಂದೂ ಸಂಘಟನೆಗಳ ಕಾರ್ಯಕರ್ತರು, ಗೋಸಾವಿ ಜನಾಂಗದವರು 10 ದಿನಗಳ ಕಾಲ ಅಹೋರಾತ್ರಿ ಧರಣಿ ಸತ್ಯಾಗ್ರಹ, ಲಕ್ಷ್ಮೇಶ್ವರ ಬಂದ್‌ನಂತಹ ಹೋರಾಟ ನಡೆಸಿದ ನಂತರ ಅಂದಿನ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಬಾಬಾಸಾಹೇಬ ನೇಮಗೌಡ ರಿತ್ತಿ ಅವರನ್ನು ಬೆಳಗಾವಿಗೆ ವರ್ಗಾಯಿಸಿದ್ದರು. ಇದೀಗ ಮತ್ತೆ ಶಿರಹಟ್ಟಿ ಪಿಎಸ್‌ಐ ಆಗಿ ಆಗಮಿಸಿದ್ದಾರೆಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಸತೀಶ ಕುಂಬಾರ, ಸಂತೋಷ ಕುರಿ, ಕುಮಾರ ನಡಗೇರಿ, ಶಿವಯೋಗಿ ಹಿರೇಮಠ, ವೆಂಕಟೇಶ ದೊಡ್ಡಮನಿ, ಗಂಗವ್ವ ಲಮಾಣಿ, ಪ್ರಕಾಶ ಬಡೆಣ್ಣವರ, ಪರಶುರಾಮ ಡೊಂಕಬಳ್ಳಿ, ನಿಖಿಲ ಗೋಸಾವಿ, ಕಿರಣ ಹಿರೇಮಠ ಮುಂತಾದವರಿದ್ದರು.

> ಸರಕಾರ ಕೂಡಲೇ ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಗದಗ ಜಿಲ್ಲೆಯಿಂದ ಬೇರೆ ಕಡೆಗೆ ವರ್ಗಾಯಿಸಬೇಕು. ಒಂದು ವೇಳೆ ವರ್ಗಾಯಿಸದಿದ್ದಲ್ಲಿ ಧರಣಿ ಸತ್ಯಾಗ್ರಹ, ರಸ್ತೆ ತಡೆ, ಅಹೋರಾತ್ರಿ ಧರಣಿ, ಉಪವಾಸ ಸತ್ಯಾಗ್ರಹ, ಶಿರಹಟ್ಟಿ ಬಂದ್‌ನಂತಹ ಉಗ್ರ ಹೋರಾಟ ಪ್ರಾರಂಭಿಸುವದು ಅನಿವಾರ್ಯವಾಗುತ್ತದೆಯೆಂದು ರಾಜೂ ಖಾನಪ್ಪನವರ ಎಚ್ಚರಿಸಿದರು.

# ಹೆಸರು ನೋಂದಾಯಿಸಲು ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ದಿನಾಂಕ 25-11-2025ರಿಂದ 10-12-2025ರವರೆಗೆ ಅವಕಾಶ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರ ಮತ ಕ್ಷೇತ್ರದ ಆಕಾಂಕ್ಷಿತ ಅಭ್ಯರ್ಥಿ ಡಾ. ಅಮರೇಶ ನಾಶಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದಿನಾಂಕ 06-11-2022ರ ಪೂರ್ವದಲ್ಲಿ ಪದವಿ ಪಡೆದವರು ಮಾತ್ರ ಅರ್ಹರಾಗಿದ್ದು, ನಮೂನೆ 18ನ್ನು ಭರ್ತಿ ಮಾಡಿ ನಿಗದಿಪಡಿಸಿದ ಕಾರ್ಯಾಲಯಗಳಲ್ಲಿ ಸಲ್ಲಿಸಬಹುದು. ಮೂರು ವರ್ಷಗಳ ಅಂಕಪಟ್ಟಿ, ಘಟಿಕೋತ್ಸವ ಪ್ರಮಾಣಪತ್ರ, ಪಾಸಾದ ಪ್ರಮಾಣಪತ್ರ, ಡಿಪ್ಲೋಮಾ ಪ್ರಮಾಣಪತ್ರ, ಆಧಾರ್ ಕಾರ್ಡ್, ಮತದಾರರ ಚೀಟಿ, ಪಾಸ್‌ಪೋರ್ಟ್ ಅಳತೆಯ (ಬಿಳಿ ಬಣ್ಣದ ಹಿನ್ನೆಲೆಯ) ಭಾವಚಿತ್ರದ ಪ್ರತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ಅಥವಾ ನೋಟರಿಯುವರಿಂದ ದೃಢಿಕರಿಸಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಧಾರವಾಡ, ಹಾವೇರಿ, ಉತ್ತರ ಕನ್ನಡ, ಗದಗ ಜಿಲ್ಲೆಗಳ ಪದವೀಧರರು ನೋಂದಣಿ ಮಾಡಲು ಅವಧಿ ವಿಸ್ತರಿಸಲಾಗಿದೆ ಎಂದು ಡಾ. ಮರೇಶ ನಾಶಿ ತಿಳಿಸಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-9886752869 ಸಂಪರ್ಕಿಸಲು ಕೋರಿದ್ದಾರೆ.

# ರಾಜ್ಯಪಾಲರು ಮಸೂದೆಗಳನ್ನು ಅಂಗೀಕರಿಸಲು ಸಮಯ ಮಿತಿ ನಿಗದಿ ಮಾಡುವವರೆಗೆ ವಿಶ್ರಾಂತಿ ಪಡೆಯುವುದಿಲ್ಲ: ಸ್ಟಾಲಿನ್

■ ವಿಜಯಸಾಕ್ಷಿ ಸುದ್ದಿ, ತಮಿಳುನಾಡು



ರಾಜ್ಯ ಶಾಸಕಾಂಗಗಳು ಅಂಗೀಕರಿಸಿದ ಮಸೂದೆಗಳನ್ನು ಅಂಗೀಕರಿಸಲು ರಾಜ್ಯಪಾಲರಿಗೆ ಸಮಯ ಮಿತಿಯನ್ನು ನಿಗದಿಪಡಿಸಲು ಸಂವಿಧಾನದ 200ನೇ ವಿಧಿಗೆ ತಿದ್ದುಪಡಿ ತರಬೇಕೆಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಶುಕ್ರವಾರ ಆಗ್ರಹಿಸಿದ್ದಾರೆ.

ರಾಷ್ಟ್ರಪತಿಗಳ ಉಲ್ಲೇಖಕ್ಕೆ ಉತ್ತರಿಸುವಾಗ ಸುಪ್ರೀಂ ಕೋರ್ಟ್‌ನ ಅಭಿಪ್ರಾಯವು ಏಪ್ರಿಲ್ 8, 2025 ರಂದು ತಮಿಳುನಾಡು ರಾಜ್ಯಪಾಲ ಆರ್.ಎನ್. ರವಿ ತಡೆಹಿಡಿಯಲಾದ ಹತ್ತು ಮಸೂದೆಗಳಿಗೆ ಒಪ್ಪಿಗೆ ನೀಡಲಾಗಿದೆ ಎಂದು ಪರಿಗಣಿಸಿದ ತೀರ್ಪಿನ ಮೇಲೆ "ಯಾವುದೇ ಪರಿಣಾಮ ಬೀರುವುದಿಲ್ಲ" ಎಂದು ಅವರು ಪ್ರತಿಪಾದಿಸಿದ್ದಾರೆ.

ಈ ವೇಳೆ ರಾಜ್ಯಗಳ ಹಕ್ಕು ಮತ್ತು ನಿಜವಾದ ಒಕ್ಕೂಟಕ್ಕಾಗಿ ಡಿಎಂಕೆಯ ಹೋರಾಟ ಮುಂದುವರಿಸಲಿದೆ ಎಂದು ಸ್ಟಾಲಿನ್ ಹೇಳಿಕೆಯಲ್ಲಿ ತಿಳಿಸಿದ್ದಾರೆ. ರಾಜ್ಯಪಾಲ ರವಿ ಅವರ "ಪಾಕೆಟ್ ವೀಟೋ ಸಿದ್ಧಾಂತ" ಮತ್ತು ಮಸೂದೆಗಳನ್ನು ರಾಜಭವನ ಕೊಲ್ಲಬಹುದು ಅಥವಾ ಹೂಳಬಹುದು ಎಂಬ ಅವರ ಪ್ರತಿಪಾದನೆಯನ್ನು ಸುಪ್ರೀಂ ಕೋರ್ಟ್ ತಿರಸ್ಕರಿಸಿದೆ ಎಂಬ ಗುರುವಾರದ ಅಭಿಪ್ರಾಯವನ್ನು ಅವರು ವ್ಯಾಖ್ಯಾನಿಸಿದ್ದಾರೆ.

# ಶಿವಾನುಭವ ಸಂಪದ, ಕಾರ್ತಿಕೋತ್ಸವ ನಾಳೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ವತಿಯಿಂದ ನಿಡಗುಂದಿ ಗ್ರಾಮದ ಶ್ರೀ ಕುಮಾರೇಶ್ವರ ಬಿಲ್ವಪತ್ರೆ ವನದಲ್ಲಿ ನ.23ರಂದು ಸಂಜೆ 5.30ಕ್ಕೆ 18ನೇ ಶಿವಾನುಭವ ಸಂಪದ ಹಾಗೂ ಕಾರ್ತಿಕ ದಿಪೋತ್ಸವವನ್ನು ಹಮ್ಮಿಕೊಳ್ಳಲಾಗಿದೆ.

ಬಾಳೆಹೊಸೂರ-ಶಿರಹಟ್ಟಿ ಸಂಸ್ಥಾನ ಭಾವೈಕ್ಯತಾ ಮಹಾಪೀಠದ ಫಕೀರ ದಿಂಗಾಲೇಶ್ವರ ಸ್ವಾಮೀಜಿಗಳು ಸನ್ನಿಧಾನ ವಹಿಸುವರು. ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ನೇತೃತ್ವ ವಹಿಸುವರು. ನಿಡಗುಂದಿ ಧರ್ಮರ ಮಠದ ಷಣ್ಮುಖಪ್ಪಜ್ಜನವರು ಸಮ್ಮುಖ ವಹಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಕುಮಾರ ಶ್ರೀಗಳ ಉಪವಾಸ ಅಂತ್ಯ

▶▶ ಮೊದಲನೇ ಪುಟದಿಂದ

ಮತ್ತು ರೈತರಿಗೆ, ಜಿಲ್ಲಾಧಿಕಾರಿಗಳಿಗೆ ಸಲ್ಲುತ್ತದೆ. ಅನ್ನದಾತ ಒಗ್ಗಟ್ಟಾಗಿ ಹೋರಾಟ ಮಾಡಿದರೆ ಜಯ ಇದ್ದೇ ಇರುತ್ತದೆ ಎಂಬುದಕ್ಕೆ ಈ ಹೋರಾಟವೇ ಸಾಕ್ಷಿಯಾಗಿದೆ ಎಂದರು.

ಕುಂದಗೋಳದ ಬಸವಣ್ಣಜ್ಜ ಸ್ವಾಮೀಜಿ ಮಾತನಾಡಿ, ರೈತರು ಹೋರಾಟಕ್ಕೆ ಇಳಿಯುವ ಮುನ್ನವೇ ಸರ್ಕಾರ ಎಚ್ಚೆತ್ತು ಅವರ ಸಮಸ್ಯೆ ಪರಿಹರಿಸಲು ಮುಂದಾಗಬೇಕು ಎಂದು ತಿಳಿಸಿದರು.

ಬಟಗುರ್ಕಿಯ ಗದಗೆಯ್ಯ ದೇವರು, ಮಾಜಿ ಶಾಸಕ ರಾಮಣ್ಣ ಲಮಾಣಿ, ಮಹೇಶ ಹೊಗೆಸೊಪ್ಪಿನ, ಚಂದ್ರಣ್ಣ ಮುಂಡವಾಡ, ಶಿವಣ್ಣ ಬಂಕಾಪುರ, ಶಿವನಗೌಡ್ರ ಪಾಟೀಲ, ವೀರೇಂದ್ರಗೌಡ ಪಾಟೀಲ, ಟಾಕಪ್ಪ ಸಾತಪುತೆ, ಸೋಮಣ್ಣ ಡಾಣಗಲ್ಲ, ಸುರೇಶ, ಅಭಯ ಜೈನ್, ದಾದಾಪೀರ್ ಮುಚ್ಚಾಲೆ, ಶಿವಾನಂದ ಲಿಂಗಶೆಟ್ಟಿ, ಗುರಪ್ಪ ಮುಳಗುಂದ, ವಿರುಪಾಕ್ಷಪ್ಪ ಮುದಕಣ್ಣವರ, ಪವನ ಬಂಕಾಪುರ, ಸುರೇಶ ಹಟ್ಟಿ, ರಾಮಣ್ಣ ಗೌರಿ, ಪ್ರಕಾಶ ಕೊಂಚಿಗೇರಿಮಠ ಸೇರಿದಂತೆ ಮತ್ತಿತರರು ಇದ್ದರು.

# ವಾಹನ ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ಸಾರಿಗೆ ಇಲಾಖೆಯಲ್ಲಿ 1991-92 ರಿಂದ 2019-2020 ರ ಅವಧಿಯಲ್ಲಿ ಮೋಟಾರು ವಾಹನ ಕಾಯಿದೆ/ನಿಯಮಗಳ ಉಲ್ಲಂಘನೆ ಸಂಬಂಧ ದಾಖಲಾಗಿ ಬಾಕಿ ಇರುವ ಡಿ.ಎಸ್.ಎ(ಇಲಾಖಾ ಶಾಸನ) ಪ್ರಕರಣಗಳ ದಂಡದ ಮೊತ್ತದಲ್ಲಿ 50% ರಷ್ಟು (ಶೇ. ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ದಿ.21-11-2025 ರಿಂದ 12-12-2025 ರವರೆಗೆ ಕಾಲಾವಕಾಶ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ವಾಹನ ಮಾಲೀಕರು ಇದರ ಸದುಪಯೋಗ ಪಡದುಕೊಳ್ಳಲು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮತಾಂತರ ಜಾಲಕ್ಕೆ ಕಡಿವಾಣ ಹಾಕಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಪಟ್ಟಣದ ಅಲ್ಪವಯಿ ಹಿಂದೂ ಬಾಲಕನನ್ನು ಮತಾಂತರಗೊಳಿಸುವ ಉದ್ದೇಶದಿಂದ ಅಪಹರಿಸಿ ಜೀತಕ್ಕೆ ಇಟ್ಟುಕೊಂಡ ಮುಸ್ಲಿಂ ಸಮಾಜದ ಯುವಕನ ಮೇಲೆ ಕ್ರಮ ಕೈಳ್ಳಬೇಕು ಎಂದು ಆಗ್ರಹಿಸಿ ಶ್ರೀರಾಮ ಸೇನಾ ಕಾರ್ಯಕರ್ತರು ತಹಸೀಲ್ದಾರ ಧನಂಜಯ ಎಂ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಶ್ರೀರಾಮ ಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಜಿಲ್ಲೆಯಾದ್ಯಂತ ಮುಗ್ಧ ಹಿಂದೂಗಳನ್ನು ಬಲವಂತದಿಂದ, ಪುಸಲಾಯಿಸಿ ಮತಾಂತರಗೊಳಿಸುವ ಜಾಲ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಆದರೆ ಇದಕ್ಕೆ ಕಡಿವಾಣ ಹಾಕುವ ಕಾರ್ಯಗಳು ನಡೆಯುತ್ತಿಲ್ಲ. ಹಿಂದೆ ಹಿಂದೂ ಯುವತಿಯರನ್ನು ಪ್ರೀತಿಯ ಬಲೆಗೆ ಬೀಳಿಸಿ ಮದುವೆಯಾಗಿ ಮತಾಂತರ ಮಾಡಿರುವ ಘಟನೆಗಳು ನಡೆದಿದ್ದು, ಇದೀಗ ಪಟ್ಟಣದ ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದ ಅಪ್ರಾಪ್ತ ಬಾಲಕನನ್ನು ಪಟ್ಟಣದ ಮುಸ್ಲಿಂ ಯುವಕ ಅಪಹರಿಸಿ ಕಳೆದ 45 ದಿನಗಳಿಂದ ಈ ಬಾಲಕನನ್ನು ಹುಬ್ಬಳ್ಳಿಯಲ್ಲಿ ಒತ್ತಾಯದಿಂದ ಹೋಟೆಲ್ ಒಂದರಲ್ಲಿ ಜೀತಕ್ಕಿಟ್ಟಿರುವದು ಬೆಳಕಿಗೆ ಬಂದಿದೆ. ಈ ಕೃತ್ಯವೆಸಗಿದ ವ್ಯಕ್ತಿಯ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಿ ಕಠಿಣ ಶಿಕ್ಷೆ ನೀಡಬೇಕೆಂದು ಮನವಿ ಮಾಡುವದಾಗಿ ಹೇಳಿದರು.

ತಹಸೀಲ್ದಾರ ಧನಂಜಯ ಎಂ ಮನವಿ ಸ್ವೀಕರಿಸಿದರು. ಈ ವೇಳೆ ಶ್ರೀರಾಮ ಸೇನೆ ಕಾರ್ಯಕರ್ತರಾದ ಬಾಲಕನ ತಂದೆ ಶರಣಪ್ಪ ಗಣಧಿನಿ, ತಾಯಿ ರೂಪಾ ಗಣದೀನಿ, ಗಂಗಾಧರ ಮೆಣಸಿನಕಾಯಿ, ಮಂಜುನಾಥ ಹೊಗೆಸೊಪ್ಪಿನ, ವಿಜಯ ಕುಂಬಾರ, ಪ್ರವೀಣ ಬೋಮಲೆ, ಹರೀಶ ಗೋಸಾವಿ, ಬಸವರಾಜ ಕಲ್ಲೂರ, ಕುಮಾರ ಕಣವಿ, ಆದೇಶ ಸವಣೂರ, ಪ್ರಾಣೇಶ ವ್ಯಾಪಾರಿ, ಸೋಮು ಗೌರಿ, ವಿನಾಯಕ ಸಪ್ಲಡ್ಲ್, ಕಿರಣ ಮಹಾಂತಶೆಟ್ಟರ, ವಿಶಾಲ ಬಟಗುರ್ಕಿ, ಯಶವಂತ ಬಳ್ಳಾರಿ, ಸಂತೋಷ ಬೋಮಲೆ ಮುಂತಾದವರು ಹಾಜರಿದ್ದರು.

# ದೀಪದಿಂದ ಸನ್ಮಾರ್ಗ ಪ್ರಾಪ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಬದುಕಿನಲ್ಲಿ ಪರಿವರ್ತನಾ ಶೀಲತೆಯನ್ನು ತರುವ ಕಾರ್ತಿಕ ಮಾಸದ ದೀಪ ಮನುಷ್ಯನಲ್ಲಿನ ಅರಿಷಡ್ವರ್ಗಗಳನ್ನು ಕಳೆದು ಸಂಸ್ಕಾರ ಮೂಡಿಸಿ ಸನ್ಮಾರ್ಗ ಪ್ರಾಪ್ತಗೊಳಿಸುತ್ತದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಗುರುವಾರ ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಗಡ್ಡಯ್ಯಸ್ವಾಮಿ ಮಠದಲ್ಲಿ ನಡೆದ ಕಾರ್ತಿಕ ದೀಪೋತ್ಸವ ಮತ್ತು ಧಾರ್ಮಿಕ ಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.


ಯಾವುದೇ ಜಾತಿ, ಧರ್ಮ, ಮೇಲು-ಕೀಳೆಂಬ ಬೇಧವಿಲ್ಲ. ದೀಪದ ಬೆಳಕಿನಂತೆ ಮನುಷ್ಯನ ಭಾವನೆಗಳು ಪರಿಶುದ್ಧವಾಗಿರಲಿ. ದೀಪ ಎಲ್ಲರನ್ನೂ ಒಗ್ಗೂಡಿಸುವ, ಬಾಂಧವ್ಯ ಬೆಸೆಯುವ ಚೈತನ್ಯಶಕ್ತಿ ಹೊಂದಿದೆ. ದೇಗುಲ-ಮಠಗಳು ಮನುಷ್ಯರ ಬದುಕಿಗೆ ಆಚಾರ-ವಿಚಾರ, ಸಂಸ್ಕಾರ, ಸನ್ಮಾರ್ಗದ ದಾರಿ ತೋರುತ್ತವೆ. ಹಿರಿಯರು ತೋರಿದ ಸತ್ಪರಂಪರೆ, ಆಚರಣೆಗಳನ್ನು ಪಾಲಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ನೂರಾರು ವರ್ಷಗಳ ಧಾರ್ಮಿಕ ಇತಿಹಾಸ ಹೊಂದಿರುವ ಶ್ರೀಮಠವು ಈ ಭಾಗದ ಜನರ ಶೃದ್ಧಾ ಭಕ್ತಿಯ ಕೇಂದ್ರವಾಗಿದೆ ಎಂದರು.

ಲಕ್ಷ್ಮೇಶ್ವರ ಕರೇವಾಡಿಮಠದ ಶ್ರೀ ಮಳೆಮಲ್ಲಿಕಾರ್ಜುನ ಸ್ವಾಮಿಗಳು ಉಪಸ್ಥಿತರಿದ್ದರು. ಶ್ರೀಮಠದ ವಂಶಸ್ಥರು, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಅಧ್ಯಕ್ಷತೆ ವಹಿಸಿದ್ದರು. ಸೇರಿದ್ದ ಅಪಾರ ಭಕ್ತ ಸಮೂಹ ಕಾರ್ತಿಕ ದೀಪ ಬೆಳಗಿಸಿದ್ದರಿಂದ ಮಠದ ಆವರಣ ದೀಪಪ್ರಜ್ವಲನೆಯಿಂದ ಕಂಗೊಳಿಸಿತು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಎಸ್.ಪಿ. ಬಳಿಗಾರ, ಆನಂದ ಗಡ್ಡದೇವರಮಠ, ವಿರೂಪಾಕ್ಷಪ್ಪ ಪಡಗೇರಿ, ಬಿ.ಡಿ. ದೊಡ್ಡಮನಿ, ಶೇಖಣ್ಣ ಕಾಳೆ, ಚನ್ನಪ್ಪ ಜಗಲಿ, ಈರಪ್ಪ ಲಮಾಣಿ, ಲಕ್ಷ್ಮಣಗೌಡ ಪಾಟೀಲ, ಮಹೇಶ ಲಿಂಬಯ್ಯಸ್ವಾಮಿಮಠ, ಬಸವರಾಜ ಬೆಂಡಿಗೇರಿ, ಚಂಬಣ್ಣ ಬಾಳಿಕಾಯಿ, ಡಿ.ಕೆ. ಹೊನ್ನಪ್ಪನವರ, ಈರಣ್ಣ ಅಂಕಲಕೋಟಿ, ಸುಭಾಸ ಓದುನವರ, ಕಿರಣ ನವಲೆ, ಶಿವಯೋಗಿ ಗಡ್ಡದೇವರಮಠ, ಎಂ.ಕೆ. ಕಳ್ಳಿಮಠ, ಶಿವಯೋಗಿ ಗಡ್ಡದೇವರಮಠ ಸೇರಿ ಮಠದ ಭಕ್ತರು ಪಾಲ್ಗೊಂಡಿದ್ದರು.

# ನಿಧನ

## ಬಾಬಾಸಾ ಸುಬ್ಬಣಸಾ ಬಾಂಡಗೆ



**ಗದಗ:** ನಗರದ ಹುಬ್ಬಳ್ಳಿ ರಸ್ತೆ ಕೇಶವ ನಗರ ನಿವಾಸಿ, ವೆಂಕಟೇಶ ಜ್ಯುವೆಲರ್ಸ್ ಮಾಲೀಕರಾದ ಬಾಬಾಸಾ ಸುಬ್ಬಣಸಾ ಬಾಂಡಗೆ (78) ಅವರು ಗುರುವಾರ ರಾತ್ರಿ ನಿಧನರಾದರು.

ಮೃತರು ಪತ್ನಿ, ಹಾಗೂ ಗದಗ ಎಸ್.ಎಸ್.ಕೆ ಸಮಾಜದ ಅಧ್ಯಕ್ಷ ಪಕೀರಸಾ ಬಾಂಡಗೆ ಸೇರಿದಂತೆ ನಾಲ್ವರು ಪುತ್ರರು, ಪುತ್ರಿ, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು, ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಸಂತಾಪ: ಬಾಬಾಸಾ ಬಾಂಡಗೆ ಅವರ ನಿಧನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಎಸ್‌ಎಸ್‌ಕೆ ಸಮಾಜ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ ಹಾಗೂ ಮಹಿಳಾ ಮಂಡಳ ಸೇರಿದಂತೆ ಸಮಾಜ ಬಾಂಧವರು ಸಂತಾಪ ಸೂಚಿಸಿದ್ದಾರೆ.

## ಬಸವಣ್ಣೆವ್ವ ಅಸುಂಡಿ



**ಹುಬ್ಬಳ್ಳಿ:** ಬಸವಣ್ಣೆವ್ವ ಶಿವಲಿಂಗಪ್ಪ ಅಸುಂಡಿ (83) ಶುಕ್ರವಾರ ಮಧ್ಯಾಹ್ನ ಚನ್ನಮ್ಮ ಕಿತ್ತೂರಿನ ಸ್ವಗೃಹದಲ್ಲಿ ನಿಧನ ಹೊಂದಿದರು. ಕಕ್ಕೇರಿಯ ಪ್ರಜ್ಞಾನೋದಯ ಆಶ್ರಮದ ಭಕ್ತರಾಗಿದ್ದ ಬಸವಣ್ಣೆವ್ವ ಶಿವಲಿಂಗಪ್ಪ ಅಸುಂಡಿ ಅವರಿಗೆ ನಾಲ್ವರು ಗಂಡು ಮಕ್ಕಳು, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವಿದೆ.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ ಸಚಿವ ಎಚ್.ಕೆ. ಪಾಟೀಲ ಅವರ ಆಪ್ತ ಸಹಾಯಕ ಶ್ರೀಕಾಂತ್ ಅಸುಂಡಿ ಅವರು ಮೃತರ ಪುತ್ರರಲ್ಲೊಬ್ಬರು.

ಸಂತಾಪ: ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಸಚಿವ ಎ.ಎಂ. ಹಿಂಡಸಗೇರಿ, ಕಿತ್ತೂರ ಶಾಸಕ ಬಾಬಾಸಾಹೇಬ ಪಾಟೀಲ, ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಶೋಕ ವ್ಯಕ್ತಪಡಿಸಿದ್ದಾರೆ.

ಕಛೇರಿ ಸಿಬ್ಬಂದಿ ಶೋಕ: ಸಹೋದ್ಯೋಗಿ ಶ್ರೀಕಾಂತ ಅಸುಂಡಿ ಅವರ ಮಾತೋಶ್ರೀಯವರ ನಿಧನಕ್ಕೆ ಸಚಿವರ ಕಛೇರಿಯ ಸಿಬ್ಬಂದಿಗಳು, ಸಹದ್ಯೋಗಿಗಳು ಶೋಕ ವ್ಯಕ್ತಪಡಿಸಿದ್ದಾರೆ.

# ಟಿಎಪಿಸಿಎಂಎಸ್‌ಗೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶುಕ್ರವಾರ ಶಿರಹಟ್ಟಿ ತಾಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ವಿಶ್ವನಾಥ ಕಪ್ಪತ್ತನವರ, ಉಪಾಧ್ಯಕ್ಷರಾಗಿ ಲಕ್ಷ್ಮಣಗೌಡ ಪಾಟೀಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿರ್ದೇಶಕರಾಗಿ ಶಿವಯೋಗಿ ನಂದಿಬೇವೂರಮಠ, ಬಸವರಾಜ ಭರಮಣ್ಣವರ, ಸೂರ್ಯಕಾಂತ ಕಪ್ಪತ್ತನವರ, ನಾಗರಾಜ ಲಕ್ಕುಂಡಿ, ಚಂದ್ರಪ್ಪ ತಳವಾರ, ಪಾರ್ವತಿ ಅಕ್ಕಿ, ಸುಮಾ ಮಹಾಜನಶೆಟ್ಟರ, ಪರಪ್ಪ ಹೊನಗಣ್ಣವರ, ಕೊಟ್ರೇಶ ಸಜ್ಜನರ, ರಾಜಶೇಖರ ಪಾಟೀಲ, ಸಂದೇಶ ಗಾಣಗೇರ, ವಸಂತ ಜಗ್ಗಲರ ಆಯ್ಕೆಯಾಗಿದ್ದಾರೆ.

ಹುಮಾಯೂನ್ ಮಾಗಡಿ, ಸಂದೀಪ ಕಪ್ಪತ್ತನವರ, ಚುನಾವಣಾಧಿಕಾರಿಯಾಗಿ ಪ್ರಶಾಂತ ಮುಧೋಳ, ಅಕ್ಕಮ್ಮ ಚಂದರಗಿ, ಸಂಘದ ಮುಖ್ಯ ಕಾರ್ಯನಿರ್ವಾಹಕ ಮಹೇಶ ಮತ್ತೂರ, ತಿಪ್ಪಣ್ಣ ಕೊಂಚಿಗೇರಿ ಉಪಸ್ಥಿತರಿದ್ದರು.

## ಕ್ರೀಡಾಕೂಟದಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕರ್ನಾಟಕ ಸರಕಾರ ಹಾಗೂ ಶಾಲಾ ಶಿಕ್ಷಣ ಇಲಾಖೆಯಿಂದ ಜರುಗಿದ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಕುರ್ತಕೋಟಿ ಗ್ರಾಮದ ಹುಲಕೋಟಿ ಶಿಕ್ಷಣ ಸಂಸ್ಥೆಯ ಮನೋಹರ ಇನಾಮತಿ ಪ್ರೌಢಶಾಲೆಯ ವಿದ್ಯಾರ್ಥಿನಿಯರಾದ ವೈಷ್ಣವಿ ಕೋಳಿವಾಡ, ಶಾಹೀನ ನದಾಫ್ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಶಿಲ್ಪಾ ಕುಂಬಾರ 3 ಸಾವಿರ ಮೀ ಓಟದಲ್ಲಿ ದ್ವಿತೀಯ, ಸಂಜಯ ಗಣಾಚಾರಿ 110 ಮೀ ಅಡತಡೆ ಓಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು, ಸಂಸ್ಥೆಯ ಅಧ್ಯಕ್ಷ ಆರ್.ಎಂ. ಮೂಲಿಮನಿ, ಆರ್.ಎಸ್. ಪಾಟೀಲ, ಯು.ವಿ. ಬೇಟಗೇರಿ, ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣಾ ಇನಾಮತಿ, ದೈಹಿಕ ಶಿಕ್ಷಕ ಎಂ.ಎಚ್. ಅಂಗಡಿ, ಶಾಲಾ ಸಿಬ್ಬಂದಿಗಳು ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

**ಸುಕ್ಷೇತ್ರ ಬಳಗಾನೂರಿನ ಪರಮಪೂಜ್ಯ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವದಲ್ಲಿ ಶ್ರೀ ಶಿವಶಾಂತವೀರ ಶರಣರು**

# ಸಾಮೂಹಿಕ ವಿವಾಹಗಳು ಬಡವರಿಗೆ ವರದಾನ

■ ವಿಜಯಸಾಕ್ಷಿ ಸುದ್ದಿ, ಡಂಬಳ




ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಬಡವರಿಗೆ, ನಿರ್ಗತಿಕರಿಗೆ, ಅಸಹಾಯಕರಿಗೆ, ಬ್ಯಾಂಕ್ ಸಾಲ, ಗೃಹ ಸಾಲ, ಜಮೀನು ಒತ್ತೆಯಿಡುವುದು ಮುಂತಾದ ಸಂದರ್ಭಗಳನ್ನು ತಪ್ಪಿಸುವಂತಹ ಮಹತ್ವದ ಕಾರ್ಯ ಸಾಮೂಹಿಕ ವಿವಾಹ ಕಾರ್ಯ. ಇದು ಬಡವರಿಗೆ ವರದಾನವಾಗಿದೆ ಎಂದು ಸುಕ್ಷೇತ್ರ ಜಂತ್ಲಿ-ಶಿರೂರ ಬಳಗಾನೂರಿನ ಪರಮಪೂಜ್ಯ ಶಿವಶಾಂತವೀರ ಶರಣರು ಹೇಳಿದರು.

ಡಂಬಳ ಹೋಬಳಿಯ ಸುಕ್ಷೇತ್ರ ಜಂತಲಿ-ಶಿರೂರದ ಪರಮಪೂಜ್ಯ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವ, ಕಲಬುರ್ಗಿ ಶ್ರೀ ಶರಣಬಸವೇಶ್ವರ ಪುರಾಣ ಮಂಗಲೋತ್ಸವ, ಕುಂಭೋತ್ಸವ, 1008 ದೀಪೋತ್ಸವ, 16 ಜೋಡಿಗಳ ಸಾಮೂಹಿಕ ವಿವಾಹ ಮಹೋತ್ಸವದ ಪಾವನ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಂಸಾರದಲ್ಲಿ ಸುಖ-ದುಃಖ ಇದ್ದೇ ಇರುತ್ತದೆ. ಎರಡನ್ನೂ ಸಮಾನವಾಗಿ ಅಳವಡಿಸಿಕೊಂಡು ಕಾಯಕನಿಷ್ಠರಾಗಿ, ಶರಣರ ಮಾರ್ಗದಲ್ಲಿ ನಡೆದು ಬದುಕು ಕಟ್ಟಿಕೊಳ್ಳಬೇಕು. ಶ್ರೀಮಠದ ಜಾತ್ರಾ ಮಹೋತ್ಸವದ ಯಶಸ್ಸಿಗೆ ಪೂಜ್ಯರ ಕರ್ತೃತ್ವ ಶಕ್ತಿ, ಭಕ್ತರ ನಿಷ್ಕಲ್ಮಷ ಭಕ್ತಿ ಕಾರಣವೆಂದು ಶ್ರೀಗಳು ಹೇಳಿದರು.

ಮನುಷ್ಯನ ಬದುಕು ಬೆಳಗಲು ಪೂಜ್ಯ ಚನ್ನವೀರ ಶರಣರಂತಹ ಮಹಾತ್ಮರ ಮಹಾಬೆಳಕು ಅವಶ್ಯ. ಮನುಷ್ಯನ ಕತ್ತಲಿನ ಕಾರ್ಮೋಡದಿಂದ ಹೊರಬರಲು ಮಹಾತ್ಮರ ಸಂದೇಶ, ಅವರ ಜೀವನದ ಮಹಾಬೆಳಕು ಅವಶ್ಯ. ಹಾಗೆಯೇ ಮನುಷ್ಯ ದಾಂಪತ್ಯ ಧರ್ಮವನ್ನು ಅಳವಡಿಸಿಕೊಳ್ಳುವುದು ಸಹ ಅಗತ್ಯ. ತನ್ನ ಮನಸ್ಸು ಮತ್ತು ಹೃದಯ ಶ್ರೀಮಂತಿಕೆಯನ್ನು ಬೆಳೆಸಿಕೊಂಡು ಶರಣರು ತೋರಿದ ಸನ್ಮಾರ್ಗದಲ್ಲಿ ನಡೆದು ಪರೋಪಕಾರ, ಧರ್ಮ ಸಹಿಷ್ಣುತೆ, ಭ್ರಾತೃತ್ವ, ಭಕ್ತಿ ಮೈಗೂಡಿಸಿಕೊಂಡು ಜೀವನದಲ್ಲಿ ಯಶಸ್ಸು ಕಾಣಬೇಕು ಎಂದು ಹೇಳಿದರು.

ಹೊಸಹಳ್ಳಿಯ ಬೂದೀಶ್ವರ ಮಹಾಸ್ವಾಮಿಗಳು ಪಾವನ ಸಾನ್ನಿಧ್ಯ ವಹಿಸಿ ಮಾತನಾಡಿ, ಸಮಾಜದಲ್ಲಿ ನಾಲ್ಕು ಜನ ಸಮೂಹವಿದ್ದು, ಒಬ್ಬ ದಡ್ಡ, ಇನ್ನೊಬ್ಬ ದಡ್ಡರ ದಡ್ಡ, ಜಾಣ, ಜಾಣರ ಜಾಣ. ಇಂತಹ ಸಮಾಜದಲ್ಲಿ ಇದ್ದು ಇವರಲ್ಲಿ ಇವರು ಮಾನವ ಕುಲಕ್ಕೆ ಬೆಳಕಿನ ಸನ್ಮಾರ್ಗದಲ್ಲಿ ನಡೆಯುವಂತೆ ಮಾಡಿರುವ ಚಿಕ್ಕೇನಕೊಪ್ಪದ ಚನ್ನವೀರಶರಣರು ಶರಣ ಪರಂಪರೆಯ ಶ್ರೇಷ್ಠ, ಅವಿಸ್ಮರಣೀಯ ಶರಣರು. ಅವರು ಎಂದೂ ನಂದದ ನಂದಾದೀಪ ಸ್ವರೂಪರಾಗಿದ್ದಾರೆ ಎಂದು ಹೇಳಿದರು.

ಅನ್ನಪೂರ್ಣಮ್ಮ ಹನಮಂತಪ್ಪ ಹಾಸಗಲ್ಲ, ನಿರ್ಮಲಾ ಬಸವರಾಜ ಚಿಗರಿ ಇವರಿಂದ ಶಿವಶಾಂತವೀರ ಮಹಾಸ್ವಾಮಿಗಳ ತುಲಾಭಾರ ಜರುಗಿತು. ಒಂದು ತಿಂಗಳ ಕಾಲ ಜರುಗಿದ ಪುರಾಣ ಮಹಾಮಂಗಲ ನುಡಿಯನ್ನು ಶಿವಲಿಂಗಯ್ಯ ಹಿರೇಮಠ ಶಾಸ್ತ್ರಿಗಳು ನಡೆಸಿಕೊಟ್ಟರು. 16 ಜೋಡಿಗಳ ಸಾಮೂಹಿಕ ವಿವಾಹ, 20 ಸಾವಿರಕ್ಕೂ ಅಧಿಕ ಭಕ್ತರಿಗೆ ಅನ್ನ ಸಂತರ್ಪಣೆ ಜರುಗಿತು. ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಹಿರಿಯರು, ಯುವಕರು, ವಿವಿಧ ಜಿಲ್ಲೆಗಳಿಂದ ಭಕ್ತರು ಇದ್ದರು.

ಹೂವಿನಶಿಗ್ಲಿಯ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ಚಿಕೇನಕೊಪ್ಪದ ಚನ್ನವೀರ ಶರಣರು ತಮ್ಮ ದಿವ್ಯ ನಡೆ-ನುಡಿಗಳ ಮೂಲಕ ತ್ರಿಕಾಲಜ್ಞಾನ, ಕಠೋರ ತಪಸ್ಸುಗಳಿಂದ ಜನಸಾಮಾನ್ಯರಿಗೆ ಬಾಳಿನ ಸುಲಭ ದಾರಿ ತೋರಿದವರು. ಅವರ ಕಲ್ಪನೆಗಳು, ಅನುಷ್ಠಾನಗಳು, ಜಪ-ತಪಗಳು ವಿಶಿಷ್ಟವಾಗಿ ಕಂಡರೂ ಜನಸಾಮಾನ್ಯರ ಕೈಗೆ ಎಟುಕುವಂತೆ ಮೂಡಿ ಬಂದಿವೆ. ಅವರ ನುಡಿಗಳು, ನಡೆದ ದಾರಿಗಳು ಪರಸ್ಪರ ಪೂರಕ ಹಾಗೂ ಒಂದೇ ಆಗಿದ್ದರಿಂದ ಅವರು ನಡೆದಾಡಿದ ನೆಲವೆಲ್ಲ ಪಾವನವಾಗಿದೆ ಎಂದು ಹೇಳಿದರು.

# ಸಂವಿಧಾನ ದಿನಾಚರಣೆಯ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ




ಸಂವಿಧಾನ ದಿನಾಚರಣೆಯನ್ನು ಜಿಲ್ಲೆಯ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ನವೆಂಬರ್ 26ರಂದು ಅರ್ಥ ಪೂರ್ಣವಾಗಿ ಆಚರಿಸಲು ಕ್ರಮಹಿಸಬೆಂದು ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್ ತಿಳಿಸಿದರು.

ಜಿಲ್ಲಾಡಳಿತ ಭವನದ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಗುರುವಾರ ಜರುಗಿದ ಸಂವಿಧಾನ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂವಿಧಾನ ದಿನಾಚರಣೆ ನಿಮಿತ್ತ ಪ್ರೌಢಶಾಲೆ/ಕಾಲೇಜು ವಿದ್ಯಾರ್ಥಿಗಳಿಂದ ಜಿಲ್ಲಾ/ತಾಲೂಕು ಮಟ್ಟದಲ್ಲಿ ಜಾಥಾ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜದ ಪ್ರದರ್ಶನದೊಂದಿಗೆ ಸಂವಿಧಾನ ಪುಸ್ತಕವನ್ನು ಪ್ರದರ್ಶಿಸುವುದು, ವಿವಿಧ ಕನ್ನಡಪರ ಸಂಘಟನೆಗಳು, ದಲಿತಪರ ಸಂಘಟನೆಗಳ ಮುಖಂಡರು, ಸಂಘ-ಸಂಸ್ಥೆಯ ಪಧಾಧಿಕಾರಿಗಳು, ಸ್ವಯಂ ಸೇವಾ ಸಂಸ್ಥೆಯವರು, ಎನ್.ಸಿ.ಸಿ, ಎನ್.ಎಸ್.ಎಸ್ ವಿದ್ಯಾರ್ಥಿಗಳ ಸಹಯೋಗದೊಂದಿಗೆ ಹೆಚ್ಚು ಜನರನ್ನು ಸೇರಿಸುವ ಮೂಲಕ ಅಚ್ಚುಕಟ್ಟಾಗಿ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಆಚರಿಸಲು ಅಧಿಕಾರಿಗಳಿಗೆ ಸೂಚಿಸಿದರು.

ನ. 26ರಂದು ಜಿಲ್ಲೆಯ ವೀರರಾಣಿ ಕಿತ್ತೂರು ಚನ್ನಮ್ಮ ಸರ್ಕಲ್‌ನಿಂದ ಜಿಲ್ಲಾಡಳಿತ ಭವನದವರೆಗೂ ಸಂವಿಧಾನ ದಿನಾಚರಣೆಯ ನಿಮಿತ್ತ ತಾಲೂಕು ಮಟ್ಟದಲ್ಲಿ ರಾಷ್ಟ್ರಧ್ವಜದ ಪ್ರದರ್ಶನದೊಂದಿಗೆ ಸಂವಿಧಾನ ಪುಸ್ತಕವನ್ನು ಪ್ರದರ್ಶಿಸುವುದರ ಮೂಲಕ ಜಾಥಾಗಳನ್ನು ಹಮ್ಮಿಕೊಳ್ಳುವುದು. ಸಂವಿಧಾನ ಪುಸ್ತಕಗಳನ್ನು, ಡಾ. ಬಿ.ಆರ್. ಅಂಬೇಡ್ಕರ್ ವೇಷ-ಭೂಷಣ ಪ್ರದರ್ಶನ ಮಾಡುವುದು, ಜಿಲ್ಲಾ-ತಾಲೂಕು ಕೇಂದ್ರದಲ್ಲಿನ ಅಂಬೇಡ್ಕರ್ ಭವನ ಸೇರಿದಂತೆ ಇತರೇ ಸಭಾಭವನದಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನದ ಕುರಿತು ಉಪನ್ಯಾಸಗಳನ್ನು ನೀಡುವುದರ ಮೂಲಕ ಕಾರ್ಯಕ್ರಮಗಳನ್ನು ಆಯಾ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಆಸಕ್ತಿಯಿಂದ ಆಯೋಜಿಸಿ ಯಶಸ್ವಿಗೊಳಿಸಲು ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್ ಸೂಚಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಮ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೊಗೇರಿ, ಪ್ರವಾಸೋದ್ಯಮ ಅಧಿಕಾರಿ ಕೊಟ್ರೇಶ ವಿಭೂತಿ, ಮಸನಾಯಕ, ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು, ಎನ್.ಸಿ.ಸಿ, ಎನ್.ಎಸ್.ಎಸ್ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ದೀಪೋತ್ಸವ ಮನಸ್ಸಿನ ಅಂಧಕಾರವನ್ನೂ ಕಳೆಯುತ್ತದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ಧರ್ಮದಲ್ಲಿ ಬರುವ ಮಾಸಗಳಲ್ಲಿ ಅತ್ಯಂತ ಶ್ರೇಷ್ಠವಾದ ಮಾಸವೆಂದರೆ ಕಾರ್ತಿಕ ಮಾಸ. ಈ ಮಾಸದಲ್ಲಿ ಉಪವಾಸ ವ್ರತ ಸೇರಿ ಕೆಲವೊಂದು ಆಚರಣೆಗಳನ್ನು ಪಾಲಿಸಿದರೆ ಸಕಲ ಪಾಪಗಳು ಕಳೆದು, ಪುಣ್ಯಪ್ರಾಪ್ತಿಯಾಗುವ ಜೊತೆಗೆ ಧರ್ಮದ ಹಾದಿಯಿಂದ ಕಾನೂನು ಪರಿಪಾಲಕರಾಗಿ ಬದುಕಲು ಸಾಧ್ಯವಾಗುವದೆಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅಭಿಪ್ರಾಯಪಟ್ಟರು.

ಅವರು ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ತಿಕ ದೀಪೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾರ್ತಿಕ ಮಾಸದಲ್ಲಿ ದಿನದ ಅವಧಿ ಕಡಿಮೆ, ರಾತ್ರಿಯೇ ದೀರ್ಘವಾಗಿರುವ ಕಾರಣದಿಂದ ಅಂಧಕಾರದ ಪ್ರಭಾವ ಜಾಸ್ತಿ. ಋತುಮಾನದ ಅಂಧಕಾರದ ಜೊತೆಗೆ ಮನಸ್ಸಿನ ಅಂಧಕಾರವನ್ನೂ ಕಳೆಯುವುದು ಈ ಮಾಸದ ವಿಶೇಷ. ಹಾಗಾಗಿಯೇ ಇದನ್ನು ದೀಪೋತ್ಸವದ ತಿಂಗಳೆಂದು ಕರೆಯುತ್ತಾರೆ. ಈ ಮಾಸ ಆಧ್ಯಾತ್ಮ ಸಾಧಕರ ಮಾಸ. ಕಾರ್ತಿಕ ಮಾಸದಲ್ಲಿ ನಿಯಮ-ನಿಷ್ಠೆಯಿಂದ ಉಪವಾಸವಿದ್ದು ದೇವಸ್ಥಾನಕ್ಕೆ ಹೋಗಿ ದೀಪ ಹಚ್ಚಿದರೆ ಪುಣ್ಯಪ್ರಾಪ್ತಿ ಆಗುತ್ತದೆ ಎಂದು ಹೇಳಲಾಗುತ್ತದೆ ಎಂದರು.

ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ಬಿ.ಪ್ರಸನ್ನಕುಮಾರ ಮಾತನಾಡಿ, ಭಕ್ತರ ಕಲ್ಯಾಣದ ಜೊತೆಗೆ ಲೋಕ ಕಲ್ಯಾಣಕ್ಕಾಗಿ ಕಾರ್ತಿಕ ದೀಪೋತ್ಸವ ಆಚರಿಸಲಾಗುವದಲ್ಲದೆ ರಂಗ ಪೂಜೆ ಸೇರಿದಂತೆ ವಿಶೇಷ ಪೂಜೆಗಳನ್ನು ದೇವಸ್ಥಾನದಲ್ಲಿ ಪ್ರತಿ ವರ್ಷ ನಡೆಸಲಾಗುವದೆಂದರು.

ಈ ಸಂದರ್ಭದಲ್ಲಿ ಶ್ರೀಮತಿ ಸಿ.ಎಸ್. ಶಿವನಗೌಡ್ರ, ಗಣ್ಯವರ್ತಕರಾದ ಈಶ್ವರಸಾ ಮೇಹರವಾಡೆ, ನ್ಯಾಯವಾದಿ ಟಿ.ಎನ್. ಭಾಂಡಗೆ ದಂಪತಿಗಳು, ನ್ಯಾಯವಾದಿಗಳಾದ ಪ್ರಭಾಕುಮಾರಿ ಬಿ.ಎಂ., ಮಧು ಪೂಜಾರಿ ಉಪಸ್ಥಿತರಿದ್ದರು.


ಪತ್ರಕರ್ತ ಹಾಗೂ ನ್ಯಾಯವಾದಿ ಅನಂತ ಎಸ್.ಕಾರ್ಕಳ ಪ್ರಾಸ್ತಾವಿಕ ಮಾತನಾಡಿದರು. ದೇವಸ್ಥಾನ ವ್ಯವಸ್ಥಾಪಕ ರಾಮಚಂದ್ರ ಹೆಗಡೆ ವಂದಿಸಿದರು.



ಮುಳಗುಂದ ಪಟ್ಟಣ ಸಮೀಪದ ಹರ್ತಿ ಗ್ರಾಮದ ಬಸವೇಶ್ವರ ದೇವಸ್ಥಾನದಲ್ಲಿ ಪ್ರತಿ ವರ್ಷದಂತೆ ಕಾರ್ತಿಕ ಮಾಸದ ನಿಮಿತ್ತ ಬಸವೇಶ್ವರನಿಗೆ ಬೆಳಿಗ್ಗೆ ವಿಶೇಷ ಅಭಿಷೇಕ, ಮಧ್ಯಾಹ್ನ ಮಾಹಾಪ್ರಸಾದ, ಸಾಯಂಕಾಲ ಕಾರ್ತಿಕೋತ್ಸವ ಜರುಗಿತು. ಸಾವಿರಾರು ಭಕ್ತರು ಭಕ್ತಿ ಭಾವದಿಂದ ಬಸವೇಶ್ವರ ದೇವರಿಗೆ ದೀಪೋತ್ಸವ ನೆರವೇರಿಸುವ ಮೂಲಕ ದೇವರ ಕೃಪೆಗೆ ಪಾತ್ರರಾದರು.

## ದುಬೈ ಏರ್‌ಶೋನಲ್ಲಿ ಭಾರತದ ತೇಜಸ್ ಯುದ್ಧವಿಮಾನ ಪತನ ; ಪೈಲಟ್ ಸಾವು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ದುಬೈ ಏರ್ ಶೋನಲ್ಲಿ ಭಾರತೀಯ ವಾಯುಪಡೆಯ ತೇಜಸ್ ಯುದ್ಧ ವಿಮಾನ ಪತನಗೊಂಡಿದೆ. ಶುಕ್ರವಾರ (ನವೆಂಬರ್ 21) ಸ್ಥಳೀಯ ಸಮಯ ಮಧ್ಯಾಹ್ನ 2:10ರ ಸುಮಾರಿಗೆ ದುರ್ಘಟನೆ ನಡೆದಿದೆ.

ದೊಡ್ಡ ಜನಸಮೂಹದ ಮುಂದೆ ವೈಮಾನಿಕ ಪ್ರದರ್ಶನ ನೀಡುತ್ತಿದ್ದಾಗ ವಿಮಾನ ಪತನಗೊಂಡಿದೆ. ಪೈಲಟ್ ಸಾವನ್ನಪ್ಪಿದ್ದಾರೆ ಎಂದು ಭಾರತೀಯ ವಾಯುಪಡೆ ದೃಢಪಡಿಸಿದೆ.

“ದುಬೈ ಏರ್ ಶೋನಲ್ಲಿ ಇಂದು ನಡೆದ ವೈಮಾನಿಕ ಪ್ರದರ್ಶನದ ಸಮಯದಲ್ಲಿ ಐಎಎಫ್ ತೇಜಸ್ ವಿಮಾನ ಅಪಘಾತಕ್ಕೀಡಾಗಿದೆ. ಅಪಘಾತದಲ್ಲಿ ಪೈಲಟ್‌ಗೆ ಮಾರಣಾಂತಿಕ ಗಾಯಗಳಾಗಿವೆ. ಜೀವಹಾನಿಗೆ ಐಎಎಫ್ ತೀವ್ರವಾಗಿ ವಿಷಾದಿಸುತ್ತಿದೆ ಮತ್ತು ಈ ದು-ಃಖದ ಸಮಯದಲ್ಲಿ ಮೃತರ ಕುಟುಂಬದೊಂದಿಗೆ ದೃಢವಾಗಿ ನಿಲ್ಲುತ್ತದೆ. ಅಪಘಾತದ ಕಾರಣವನ್ನು ಖಚಿತಪಡಿಸಿಕೊಳ್ಳಲು ವಿಚಾರಣಾ ತಂಡವನ್ನು ರಚಿಸಲಾಗುತ್ತಿದೆ” ಎಂದು ವಾಯುಪಡೆಯ ವಕ್ತಾರರು ತಿಳಿಸಿದ್ದಾರೆ.

# ಮತಾಂತರಕ್ಕೊಳಗಾದ ಬಾಲಕನ ರಕ್ಷಣೆಗೆ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಲ್ಪವಯಿ ಬಾಲಕನನ್ನು ಒತ್ತಾಯದಿಂದ ಮತಾಂತರಗೊಳಿಸಿ ಜೀತಕ್ಕಿಟ್ಟುಕೊಂಡಿದ್ದು, ಬಾಲಕನಿಗೆ ರಕ್ಷಣೆ ನೀಡಬೇಕೆಂದು ಆಗ್ರಹಿಸಿ ಶುಕ್ರವಾರ ಶಿರಹಟ್ಟಿಯಲ್ಲಿ ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟದ ವತಿಯಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಸಂಚಾಲಕ ಸಂತೋಷ ಕುರಿ, ಜಿಲ್ಲೆಯಾದ್ಯಂತ ಮುಗ್ಧ ಹಿಂದೂಗಳನ್ನು ಬಲವಂತದಿಂದ ಮತಾಂತರಗೊಳಿಸುವ ಜಾಲ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಲಕ್ಷ್ಮೇಶ್ವರದಲ್ಲಿ ಗದುಗಿನ ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿಗೆ ಅಧ್ಯಯನಕ್ಕೆ ಬರುತ್ತಿದ್ದ ಹಿಂದೂ ಯುವತಿಯೋರ್ವಳನ್ನು ಲಕ್ಷ್ಮೇಶ್ವರದ ಮುಸ್ಲಿಂ ಯುವಕನೋರ್ವ ಪುಸಲಾಯಿಸಿ ಮತಾಂತರಗೊಳಿಸಿ ಲವ್ ಜಿಹಾದ್ ನಡೆಸಿದ್ದಾನೆ. ಯುವತಿಯ ಪಾಲಕರು ಪ್ರತಿನಿತ್ಯ ಕಣ್ಣೀರಿನಲ್ಲಿ ಕೈತೊಳೆಯುತ್ತಿದ್ದಾರೆ. ಈ ಘಟನೆ ಮಾಸುವ ಮುನ್ನವೇ ಲಕ್ಷ್ಮೇಶ್ವರದ ಅತ್ಯಂತ ಪ್ರತಿಭಾವಂತ ವಿದ್ಯಾರ್ಥಿಯೋರ್ವನನ್ನು ಪುರಸಭೆಯ ಮುಂದೆ ಚಹದ ಅಂಗಡಿ ನಡೆಸುತ್ತಿರುವ ವ್ಯಕ್ತಿ ಬೆದರಿಸಿ ಮತಾಂತರಗೊಳಿಸಿ ತಮ್ಮ ಹೋಟೆಲ್‌ನಲ್ಲಿ ಬಲವಂತವಾಗಿ ಕೆಲಸಕ್ಕಿರಿಸಿಕೊಂಡಿದ್ದರು. ಇಂತಹ ಅನೇಕ ಮತಾಂತರ ಪ್ರಕರಣದಲ್ಲಿ ಪೊಲೀಸ್ ಇಲಾಖೆ ಅಧಿಕಾರಿಗಳು ಪರೋಕ್ಷವಾಗಿ ಮತಾಂಧರಿಗೆ ಸಹಕರಿಸುತ್ತಿದ್ದಾರೆ. ಜಿಲ್ಲೆಯಲ್ಲಿ ಮುಗ್ಧ ಹಿಂದೂಗಳು ಜೀವನ ನಿರ್ವಹಣೆ ಮಾಡುವದೇ ಕಷ್ಟವಾಗಿದೆ. ಆದ್ದರಿಂದ ತಾವು ಮಧ್ಯ ಪ್ರವೇಶಿಸಿ ಕೂಡಲೇ ಜೀತಕ್ಕಿಟ್ಟುಕೊಂಡಿರುವ ಹೋಟೆಲ್ ಮಾಲೀಕರ ಮೇಲೆ ಸೂಕ್ತ ಪ್ರಕರಣ ದಾಖಲಿಸಿ ಹಿಂದೂಗಳಿಗೆ ರಕ್ಷಣೆ ನೀಡುವಂತೆ ಮನವಿ ಮೂಲಕ ಆಗ್ರಹಿಸಿದರು. ಈ ಸಂದರ್ಭದಲ್ಲಿ ಗೂಳಪ್ಪ ಕರಿಗಾರ, ಪರಶುರಾಮ ಡೊಂಕಬಳ್ಳಿ, ರಮೇಶ ಬಟ್ಟೂರ, ಬೀರೇಶ ಬಟ್ಟೂರ, ಸಂತೋಷ ಕಂಬಳಿ, ಮಾರುತಿ ಕುಳಗೇರಿ, ಮಲ್ಲಪ್ಪ, ನಾಗರಾಜ್, ಮುತ್ತು, ಲೋಕೇಶ, ಬೀರೇಶ, ಪ್ರಶಾಂತ, ಆತ್ಮಾನಂದ ಮುಂತಾದವರು ಉಪಸ್ಥಿತರಿದ್ದರು.

**ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಕಮ್ಮಟ**

# ಕನ್ನಡ ಶಾಲೆಗಳನ್ನು ಉಳಿಸುವ ಕಾರ್ಯವಾಗಲಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಡ ನಾಡಿನಲ್ಲಿ ಕನ್ನಡ ಮಾಧ್ಯಮ ಶಾಲೆಗಳು ಕಡಿಮೆಯಾಗುತ್ತಿವೆ. ಇದನ್ನು ಕನ್ನಡ ಪ್ರಾಧಿಕಾರ ದೃಢತೆಯಿಂದ ತಡೆದು ಕನ್ನಡ ಶಾಲೆಗಳ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ನಿವೃತ್ತ ಪ್ರಾಚಾರ್ಯ ಚಂದ್ರಶೇಖರ ವಸ್ತ್ರದ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ನಡೆದ 'ಆಧುನಿಕ ಕರ್ನಾಟಕ ನಿರ್ಮಾಣ; ಗದಗ ಜಿಲ್ಲೆಯ ಕೊಡುಗೆ' ಒಂದು ದಿನದ ಕಮ್ಮಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಲಿಕೆ ಎಂದಿಗೂ ಹಾಸ್ಯಾಸ್ಪದ ಕಲಿಕೆಯಾಗಬಾರದು. ಅದು ನಮ್ಮ ಜೀವನಕ್ಕೆ ಬೆಳಕು ನೀಡುವಂತಿರಬೇಕು. ಓದದಿದ್ದರೂ, ಬರೆಯದಿದ್ದರೂ ರೈತ ನಮಗೆಲ್ಲ ಅನ್ನ ನೀಡುತ್ತಾನೆ. ಅವನ ಭಾಷೆ ಬದುಕಿನ ಭಾಷೆ. ಇಂತಹ ಭಾಷೆಯು ನಮ್ಮ ಮಕ್ಕಳ ಭಾಷೆಯಾಗಬೇಕು. ಅಂದರೆ ಭಾಷೆಯನ್ನು ಮಕ್ಕಳ ಮನದಲ್ಲಿ ಅಚ್ಚೊತ್ತುವಂತೆ ಸರಿಯಾಗಿ ಕಲಿಸಬೇಕೆಂದು ವಸ್ತ್ರದ ಅಭಿಪ್ರಾಯಪಟ್ಟರು.

ನಾವೆಂದಿಗೂ ನವೆಂಬರ್ ಒಂದರ ಕನ್ನಡಿಗರಾಗಬಾರದು. ಅದೊಂದು ದಿನ ಕನ್ನಡದ ಬಗ್ಗೆ ಮಾತನಾಡಿ ಮತ್ತೆ ಅದನ್ನು ಮರೆತು ಇರುವುದನ್ನೆಂದಿಗೂ ಸಹಿಸಲು ಸಾಧ್ಯವಿಲ್ಲ. ಕನ್ನಡ ಶಬ್ದಗಳನ್ನು ಸರಿಯಾಗಿ ಅರ್ಥೈಸಿಕೊಳ್ಳುವ ಕೆಲಸವಾಗಬೇಕಿದೆ. ಆಯೋಗಗಳು ಮಂಡನೆ ಮಾಡಿರುವ ವರದಿಗಳನ್ನು ಸರಕಾರವು ಗಂಭಿರವಾಗಿ ಪರಿಗಣಿಸಿ, ಅವುಗಳ ಅನುಷ್ಠಾನಕ್ಕೆ ಮುಂದಾಗಬೇಕು. ಅಂದಾಗ ಕನ್ನಡಕ್ಕೊಂದು ಮಹತ್ವದ ಸ್ಥಾನ ದೊರಕುತ್ತದೆ. ಕನ್ನಡವು ನಮ್ಮ ನಿತ್ಯದ ಉಸಿರಲ್ಲಿ ಬೆರೆತಾಗ ಮಾತ್ರ ಕನ್ನಡ ಉಳಿದು, ಬೆಳೆದು ಬರಲು ಸಾಧ್ಯವಾಗುತ್ತದೆ ಎಂದು ವಸ್ತ್ರದ ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯೆ ದಾಕ್ಷಾಯಣಿ ಹುಡೇದ ಆಶಯ ನುಡಿಗಳನ್ನಾಡಿ, ಈ ಕಾರ್ಯಕ್ರಮವನ್ನು ಇಲ್ಲಿ ಹಮ್ಮಿಕೊಂಡ ಔಚಿತ್ಯತೆಯ ಬಗ್ಗೆ ತಿಳಿಸಿದರು. ವೇದಿಕೆಯ ಮೇಲೆ ನಿವೃತ್ತ ಪ್ರಾಚಾರ್ಯ ಹೊಳಿಯಪ್ಪ ಯಲಬುರ್ಗಿ, ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಉಪಸ್ಥಿತರಿದ್ದರು. ಡಾ. ಕಲ್ಲಯ್ಯ ಹಿರೇಮಠ ಸ್ವಾಗತಿಸಿದರು. ಪ್ರಾಧ್ಯಾಪಕ ಮಂಡಲೀಕ ಮಾದರ ನಿರೂಪಿಸಿದರು. ಐಕ್ಯೂಎಸಿ ಸಂಯೋಜಕ ಡಾ. ಡಿ.ಎಲ್. ಪವಾರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪ್ರಾಚಾರ್ಯ ಬಿ.ಎಫ್. ಚೇಗರೆಡ್ಡಿ ಮಾತನಾಡಿ, ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನವೇನೋ ಸಿಕ್ಕಿದೆ. ಆದರೆ ಅದಕ್ಕೆ ಉಳಿದ ಭಾಷೆಗಳಿಗೆ ಸಿಕ್ಕಷ್ಟು ಅನುದಾನವಾಗಲಿ, ಸೌಕರ್ಯವಾಗಲಿ ಸಿಕ್ಕಿಲ್ಲ. ಇದು ವಿಷಾದನೀಯ. ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಈ ಕಡೆಗೆ ಹೆಚ್ಚಿನ ಗಮನ ನೀಡಿ ಕನ್ನಡಕ್ಕೆ ಸಿಗಬೇಕಾದ ಎಲ್ಲ ಸೌಲಭ್ಯಗಳೂ ಸಿಗುವಂತೆ ನೋಡಿಕೊಳ್ಳಲಿ ಎಂದರು.

## ಕೊಲೆಯತ್ನ ಆರೋಪ : ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಬಂಧನ

■ ವಿಜಯಸಾಕ್ಷಿ ಸುದ್ದಿ, ಚಿತ್ತಾಪುರ

ಕೊಲೆಯತ್ನ ಆರೋಪದ ಮೇಲೆ ಕಲಬುರಗಿಯ ಚಿತ್ತಾಪುರದ ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಅನ್ನು ಅಫಜಲಪುರ ತಾಲೂಕಿನ ಶಿರವಾಳ ಸಮೀಪ ಗುರುವಾರ (ನವೆಂಬರ್ 20) ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವರದಿಯಾಗಿದೆ. ನಾಟಿ ಔಷಧಿ ನೀಡುತ್ತಿದ್ದ ರಶೀದ್ ಮುತ್ಯಾ ಎಂಬಾತನನ್ನು ಬಂಧಿಸುವಂತೆ ಆಗ್ರಹಿಸಿ ಮಣಿಕಂಠ ರಾಠೋಡ್ ಜೇವರ್ಗಿ ತಾಲೂಕಿನ ನಾರಾಯಣಪುರ ಗ್ರಾಮದಲ್ಲಿ ಗುರುವಾರ ರಾತ್ರಿ ರಶೀದ್ ಬೆಂಬಲಿಗರೊಂದಿಗೆ ಮಾತಿನ ಚಕಮಕಿ ನಡೆಸಿದ್ದರು. ಹಲವು ಜನರೊಂದಿಗೆ ಪ್ರತಿಭಟನೆ ನಡೆಸಿದ್ದರು ಎನ್ನಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka